ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೯೨**

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

**ಮಂಗಳವಾರ, ದಿನಾಂಕ : ೦೩ನೇ ಫೆಬ್ರವರಿ, ೨೦೧೫**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧ (೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಎಷ್ಟೆಷ್ಟು ಕಿ.ಮೀ. ರಾಷ್ಟ್ರೀಯ ಹೆದ್ದಾರಿಗಳು ಇವೆ ; ರಾಷ್ಟ್ರೀಯ ಹೆದ್ದಾರಿವಾರು ಮಾಹಿತಿ ನೀಡುವುದು ;

(ಆ) ಯಾವ ಯಾವ ರಾಷ್ಟ್ರೀಯ ಹೆದ್ದಾರಿಗಳ ಯಾವ ಯಾವ ಭಾಗವನ್ನು ಖಾಸಗಿ ಕಂಪನಿಗಳಿಗೆ ಅಭಿವೃದ್ಧಿಪಡಿಸಲು ನೀಡಲಾಗಿದೆ ; ಸದರಿ ಕಂಪನಿಗಳು ವೆಚ್ಚ ಮಾಡಿರುವ ಮೊತ್ತವೆಷ್ಟು ; ಆ ಮೊತ್ತವನ್ನು ಟೋಲ್ ಮೂಲಕ ವಸೂಲಿ ಮಾಡಲು ಖಾಸಗಿ ಕಂಪನಿಗಳು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ನಡುವೆ ಮಾಡಿಕೊಂಡಿರುವ ಒಡಂಬಡಿಕೆ/ಒಪ್ಪಂದಗಳು ಏನು ;

(ಇ) ಒಡಂಬಡಿಕೆ/ಒಪ್ಪಂದಗಳ ರೀತ್ಯಾ ರಾಜ್ಯ ಸರ್ಕಾರಕ್ಕೆ ಇರುವ ಹಕ್ಕುಗಳೇನು ; ಒಡಂಬಡಿಕೆ/ಒಪ್ಪಂದಗಳ ರೀತ್ಯಾ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿವಾಗಿವೆಯೇ ; ಹಾಗಿದ್ದಲ್ಲಿ, ಮಾಹಿತಿ ನೀಡುವುದು ; ಇಲ್ಲದಿದ್ದಲ್ಲಿ, ಟೋಲ್ ವಸೂಲಿ ಮಾಡಲು ಅವಕಾಶ ಇದೆಯೇ ; ಹಾಗೂ ಟೋಲ್‌ಗಳಲ್ಲಿ ಯಾವ ಯಾವ ವರ್ಗದ ವಿ.ಐ.ಪಿ. ಗಳು ಉಚಿತವಾಗಿ ಹೋಗಲು ಅವಕಾಶವಿದೆ ;



(ಈ) ವಿ.ಐ.ಪಿ ಹಾಗೂ ಇನ್ನಿತರ ಜೊತೆಯಲ್ಲಿ ಟೋಲ್ ಸಿಬ್ಬಂದಿ ಅನುಚಿತವಾಗಿ ವರ್ತಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಯಾವ ಕ್ರಮವನ್ನು ತೆಗೆದುಕೊಂಡಿದೆ ವಿವರ ನೀಡುವುದು ?

## ಶಾಂತಿನಗರ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨ (೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಂತಿನಗರ ಗೃಹ ನಿರ್ಮಾಣ ಸಹಕಾರ ಸಂಘದ ಒಟ್ಟು ಸದಸ್ಯರ ಸಂಖ್ಯೆ ಎಷ್ಟು ; ಆ ಪೈಕಿ ಎಷ್ಟು ಸದಸ್ಯರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಸದರಿ ಸಹಕಾರ ಸಂಘದಲ್ಲಿ ನಿವೇಶನ ಹಂಚಿಕೆಯಲ್ಲಿ ಆಗಿರುವ ಅವ್ಯವಹಾರ ಹಾಗೂ ಕಾನೂನು ಬಾಹಿರ ಕೃತ್ಯಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದು ಕೊಂಡಿರುವ ಕ್ರಮಗಳೇನು ;

(ಇ) ಯಾವ ಮಾನದಂಡವನ್ನು ಅನುಸರಿಸಿ ಅರ್ಹರಲ್ಲದ ಸದಸ್ಯರಿಗೆ ನಿವೇಶನಗಳನ್ನು ನೋಂದಣಿ ಮಾಡಲಾಗಿದೆ ; ಸದಸ್ಯವಾರು ಮಾಹಿತಿ ನೀಡುವುದು ;

(ಈ) ಈ ರೀತಿ ಅವ್ಯವಹಾರದ ಬಗ್ಗೆ ಬೆಂಗಳೂರಿನ ಕೇಂದ್ರ ವಿಭಾಗದ ಯಾವ ಯಾವ ಸಂಘದ ಮೇಲೆ ನಿಯಮ ೬೮ರ ಅಡಿಯಲ್ಲಿ ಆಪಾದನೆಗಳು ದೃಢಪಟ್ಟಿವೆ ;

(ಉ) ಅವರ ಮೇಲೆ ಆರೋಪ ದೃಢಪಟ್ಟಿದ್ದರೂ ಸಹ ಸಹಕಾರ ಇಲಾಖಾಧಿಕಾರಿಗಳು ಅವರ ಮೇಲೆ ಕ್ರಮ ಕೈಗೊಳ್ಳದಿರುವುದು ನಿಜವಲ್ಲವೆ ; ಇದ್ದಲ್ಲಿ ಸಂಘಗಳೊಂದಿಗೆ ಶಾಮೀಲಾಗಿ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಇಲಾಖೆ ಕೈಗೊಳ್ಳುವ ಕ್ರಮವೇನು ;

(ಊ) ೨೦೦೦ನೇ ಸಾಲಿನಿಂದ ಈವರೆವಿಗೂ ಯಾವ ಯಾವ ದಿನಾಂಕಗಳಿಂದ ೩೦ (ಬಿ) ನಿರ್ದೇಶನಗಳನ್ನು ಹೊರಡಿಸಲಾಗಿದೆ ; ಅವುಗಳ ಪ್ರತಿಗಳನ್ನು ಒದಗಿಸುವುದು ?

## ರಸ್ತೆ ಅಭಿವೃದ್ಧಿಗೆ ಬಿಡುಗಡೆ ಮಾಡಿರುವ ಅನುದಾನ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೩ (೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ಚಿಕ್ಕಮಗಳೂರು ಜಿಲ್ಲೆಗೆ ಒದಗಿಸಲಾಗಿರುವ ಅನುದಾನವೆಷ್ಟು ; ಕಾಮಗಾರಿವಾರು ಖರ್ಚು ಮಾಡಿರುವ ಮೊತ್ತವೆಷ್ಟು ; ಬಾಕಿಯಿರುವ ಮೊತ್ತದ ವಿವರಗಳನ್ನು ನೀಡುವುದು ;

(ಆ) ಈವರೆವಿಗೂ ಕೈಗೊಳ್ಳಲಾಗಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)



## ಸಹಕಾರ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪ (೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಲ್ಲಿ ಮೀಸಲಾತಿ ಅನ್ವಯ ಭರ್ತಿ ಮಾಡಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಎಷ್ಟು ಸಮಯದೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಕೃಷಿ ಭಾಗ್ಯ ಯೋಜನೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೫ (೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಕೃಷಿ ಭಾಗ್ಯ ಯೋಜನೆಯನ್ನು ಪ್ರಾರಂಭಿಸಿದ್ದು ಯಾವಾಗ ; (ಯೋಜನಾವಾರು ವಿವರಗಳನ್ನು ನೀಡುವುದು)

(ಆ) ಈ ಯೋಜನೆಯಡಿ ಒದಗಿಸಲಾಗುವ ಸೌಲಭ್ಯಗಳೇನು ; ಚಿಕ್ಕಮಗಳೂರು ಜಿಲ್ಲೆಯ ಎಷ್ಟು ಕೃಷಿನಿರತ ರೈತರನ್ನು ಫಲಾನುಭವಿಗಳನ್ನಾಗಿ ಆಯ್ಕೆ ಮಾಡಲಾಗಿದೆ ; ಇದಕ್ಕಾಗಿ ಅನುಸರಿಸಲಾಗಿರುವ ಮಾನದಂಡಗಳೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಹಕಾರ ಇಲಾಖೆ "ಪ್ರವಾಹ ಪರಿಹಾರ ನಿಧಿ"ಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬ (೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೯–೧೦ ರಲ್ಲಿ ಉತ್ತರ ಕರ್ನಾಟಕ ಪ್ರವಾಹ ಪರಿಸ್ಥಿತಿ ಉಂಟಾದ ಸಂದರ್ಭದಲ್ಲಿ ರಾಜ್ಯ ಸಹಕಾರ ಸಂಸ್ಥೆಗಳಿಂದ "ಪ್ರವಾಹ ಪರಿಹಾರ ನಿಧಿ"ಗೆ ಸಂಗ್ರಹ ಮಾಡಿದ ಒಟ್ಟು ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇಲಾಖೆ ಸುತ್ತೋಲೆಯನ್ವಯ ಸಹಕಾರ ಸಂಸ್ಥೆಗಳಿಂದ ಸಂಗ್ರಹ ಮಾಡಿದ ೧ ಲಕ್ಷ ಮೊಬಲಿಗಿಗೆ ೧ ಮನೆ ನಿರ್ಮಿಸಿ ಸಹಕಾರ ಸಂಸ್ಥೆಯ ಹೆಸರನ್ನೂ ಮನೆ ಮುಂದೆ ನಮೂದಿಸಲಾಗುವ ಉದ್ದೇಶಿತ ನಿಧಿಯನ್ನು ಬಳಸಿರುವ ಬಗ್ಗೆ ಸೂಕ್ತ ವಿವರಗಳನ್ನು ನೀಡುವುದು ?

## ವಿದ್ಯುತ್ ಸರಬರಾಜು ಮತ್ತು ವಿದ್ಯುತ್ ಕಂಬ ಹಾಗೂ ಟ್ರಾನ್ಸ್‌ಫಾರ್ಮರ್‌ಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭ (೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಜೆಸ್ಕಂ ನಿಗಮದಲ್ಲಿ ವಿದ್ಯುತ್ ಕಂಬಗಳು ಮತ್ತು ಟ್ರಾನ್ಸ್‌ಫಾರ್ಮರ್‌ಗಳ (ಪರಿವರ್ತಕಗಳು) ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಬಂದಿದ್ದಲ್ಲಿ, ಕೊರತೆ ಇರುವ ವಿದ್ಯುತ್ ಕಂಬಗಳು ಮತ್ತು ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವನ್ನು ನೀಡುವುದು) ; ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಿಗಮದಿಂದ ತುರ್ತಾಗಿ ವಿದ್ಯುತ್ ಕಂಬಗಳು ಮತ್ತು ಟ್ರಾನ್ಸ್‌ಫಾರ್ಮರ್‌ಗಳನ್ನು ಸರಬರಾಜು ಮಾಡಲು ಸರ್ಕಾರ ಕೂಡಲೇ ಕೈಗೊಳ್ಳುವ ಕ್ರಮಗಳೇನು, ಬದಲಿ ವ್ಯವಸ್ಥೆ ಮಾಡಲು ವಿಳಂಬ ನೀತಿ ಹಾಗೂ ಭ್ರಷ್ಟಾಚಾರ ನೀತಿ ಅನುಸರಿಸುತ್ತಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ನಗರೋತ್ಥಾನ ಕಾಮಗಾರಿ ನೆನೆಗುದಿಗೆ ಬಿದ್ದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮ (೧೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ನಗರೋತ್ಥಾನ ಯೋಜನೆಯ ಅಡಿಯಲ್ಲಿ ನಗರ ಮತ್ತು ಪಟ್ಟಣಗಳಲ್ಲಿ ಕಾಮಗಾರಿಗಳು ಅಪೂರ್ಣವಾಗಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ನೆನೆಗುದಿಗೆ ಬೀಳಲು ಕಾರಣಗಳೇನು, ಪೂರ್ಣ ಮಾಹಿತಿ ಒದಗಿಸುವುದು ;

(ಆ) ಬಂದಿದ್ದಲ್ಲಿ, ಪ್ರಗತಿಯಲ್ಲಿರುವ ಈ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿನ ರಸ್ತೆಗಳ ದುಸ್ಥಿತಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೯ (೦೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖಾ ರಸ್ತೆಗಳು ಯಾವುವು (ತಾಲ್ಲೂಕುವಾರು ವಿಸ್ತೀರ್ಣವಾರು ವಿವರ ನೀಡುವುದು) ; ಆ ಪೈಕಿ ಸಂಚಾರಕ್ಕೆ ಯೋಗ್ಯವಾಗಿಲ್ಲದ ರಸ್ತೆಗಳು ಯಾವುವು ; ಅವುಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ೨೦೧೪–೧೫ನೇ ಸಾಲಿಗೆ ಬೀದರ್ ಜಿಲ್ಲೆಗೆ ಅಪೆಂಡಿಕ್ಸ್–ಇ ನಲ್ಲಿ ಪ್ರಸ್ತಾವನೆ ಮಾಡಲಾಗಿರುವ ರಸ್ತೆಗಳ ಕುರಿತು ಸಂಪೂರ್ಣ ವಿವರ ಒದಗಿಸುವುದು ;

(ಇ) ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ಹಾಗೂ ಆ ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನವೆಷ್ಟು? (ಪೂರ್ಣ ವಿವರ ನೀಡುವುದು)

## ರೈತರಿಗೆ ಸಬ್ಸಿಡಿ ಸಾಲ ವಿತರಣೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦ (೧೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಇಲಾಖೆಯ ವತಿಯಿಂದ ಯಾವ ಯಾವ ಉದ್ದೇಶಕ್ಕಾಗಿ ಸಬ್ಸಿಡಿ ಸಾಲಗಳನ್ನು ನೀಡಲಾಗುತ್ತಿದೆ ;



(ಆ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಎಷ್ಟು ರೈತರಿಗೆ ಯಾವ ಯಾವ ಉದ್ದೇಶಕ್ಕೆ ಸಬ್ಸಿಡಿ ಸಾಲಗಳನ್ನು ವಿತರಿಸಲಾಗಿದೆ ;

(ಇ) ಸಬ್ಸಿಡಿ ಪಡೆದಿರುವ ರೈತರ ಹೆಸರು ಮತ್ತು ವಿಳಾಸದೊಂದಿಗೆ ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು ?

## ರೈತರ ಸಾಲ ಮನ್ನಾ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧ (೧೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಳೆದ ಮೂರು ವರ್ಷಗಳಿಂದ ಹೈದ್ರಾಬಾದ್–ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಸಹಕಾರಿ ಹಾಗೂ ಕೇಂದ್ರೀಕೃತ ಬ್ಯಾಂಕುಗಳಲ್ಲಿ ರೈತರುಗಳು ಪಡೆದ ಸಾಲದ ಪ್ರಮಾಣ ಎಷ್ಟು ಮನ್ನಾ ಮಾಡಲಾಗಿದೆ, ಫಲಾನುಭವಿ ರೈತರ ಹೆಸರು ಮತ್ತು ವಿಳಾಸದ ವಿವರದೊಂದಿಗೆ ತಾಲ್ಲೂಕವಾರು ಸಂಪೂರ್ಣ ಮಾಹಿತಿ ನೀಡುವುದು ?

## ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳ ಪ್ರಗತಿ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೨ (೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಶೀರ್ಷಿಕೆಗಳ ಅಡಿಯಲ್ಲಿ ಬಿಡುಗಡೆಯಾದ ಹಣವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ವೆಚ್ಚ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಕಳೆದ ೫ ವರ್ಷಗಳ ಅವಧಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಪೂರ್ಣಗೊಂಡ ಕಾಮಗಾರಿಗಳಿಗೆ ಪಾವತಿಸಲಾದ ಬಿಲ್ಲಿನ ಮೊತ್ತ ಎಷ್ಟು ? (ಕಳೆದ ಮೂರು ವರ್ಷಗಳ ಕಾಮಗಾರಿ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ವಿದ್ಯುತ್ ಸೌಲಭ್ಯದ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩ (೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿದ್ಯುತ್ ಸೌಲಭ್ಯ ವಂಚಿತ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)



(ಆ) ಸದರಿ ಕುಟುಂಬಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮದ್ದೂರು ಎಳನೀರು ಮಾರುಕಟ್ಟೆಯ ವಿಸ್ತೀರ್ಣವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪ (೧೮) ಮಾನ್ಯ ಕೃಷಿ ಮಾರುಕಟ್ಟೆ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ "ಮದ್ದೂರು ಎಳನೀರು ಮಾರುಕಟ್ಟೆ"ಯ ವಹಿವಾಟು ಹಿರಿಮೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮದ್ದೂರು ಎಳನೀರು ಮಾರುಕಟ್ಟೆಯ ವಿಸ್ತೀರ್ಣವನ್ನು ಹೆಚ್ಚಿಸಬೇಕೆಂಬ ಬೇಡಿಕೆ ಸರ್ಕಾರದ ಮುಂದಿದೆಯೇ ;

(ಇ) ಇದ್ದಲ್ಲಿ, ವಿಸ್ತೀರ್ಣ ಹೆಚ್ಚಿಸಲು ಮಾರುಕಟ್ಟೆಯ ಕಾಂಪೌಂಡ್‌ಗೆ ಹೊಂದಿಕೊಂಡಿರುವ ಟಿ.ಎ.ಪಿ.ಸಿ.ಎಂ.ಎಸ್.ಗೆ ಸೇರಿದ ೧.೩೧ ಎಕರೆ ಖಾಲಿ ಜಮೀನನ್ನು ಬಳಸಿಕೊಂಡು ಮಾರುಕಟ್ಟೆಯ ವಿಸ್ತೀರ್ಣವನ್ನು ಹೆಚ್ಚಿಸಲು ಉದ್ದೇಶಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ?

## ಜಲಾನಯನ ಯೋಜನೆಗಳ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫ (೧೧೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಾದ್ಯಂತ ಜಲಾನಯನ ಇಲಾಖೆಯ ವತಿಯಿಂದ ಕೈಗೊಂಡ ಯೋಜನೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕೈಗೊಂಡ ಯೋಜನೆಗಳಿಗಾಗಿ ಖರ್ಚು ಮಾಡಿರುವ ಹಣವೆಷ್ಟು ? (ತಾಲ್ಲೂಕುವಾರು ವಿವರ ಒದಗಿಸುವುದು)

## ಕೇಂದ್ರ ಸರ್ಕಾರ ೨೦೦೮ ರಲ್ಲಿ, ರಾಜ್ಯ ಸರ್ಕಾರ ೨೦೦೬ರಲ್ಲಿ, ೨೦೧೨ನೇ ಸಾಲಿನಲ್ಲಿ ಸಾಲ ಮನ್ನಾ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬ (೭೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ೨೦೦೮ ರಲ್ಲಿ ಮತ್ತು ರಾಜ್ಯ ಸರ್ಕಾರ ೨೦೦೬ ಮತ್ತು ೨೦೧೨ನೇ ಸಾಲಿನಲ್ಲಿ ರೈತರ ಸಾಲ ಮನ್ನಾ ಮಾಡಿದ್ದು ನಿಜವೇ ;

(ಆ) ಹಾಗಿದ್ದಲ್ಲಿ, ಮದ್ದೂರು ತಾಲ್ಲೂಕು ಕೊಪ್ಪ ವ್ಯವಸಾಯ ಪ್ರಾಥಮಿಕ ಕೃಷಿ ಪತ್ತಿನ ಸಂಘದಲ್ಲಿ ಈ ಸಾಲ ಮನ್ನಾ ಯೋಜನೆಗಳಡಿ ಸಾಲ ಮನ್ನಾ ಯೋಜನೆಯ ಫಲಾನುಭವಿಗಳ ಹೆಸರು, ತಂದೆಯ ಹೆಸರು ಮತ್ತು ವಿಳಾಸದೊಂದಿಗೆ ಅವರ ಸದಸ್ಯತ್ವ ಸಂಖ್ಯೆಯ ಪೂರ್ಣ ವಿವರ ನೀಡುವುದು ;



(ಇ) ಈ ಸಂಘದಲ್ಲಿ ಫಲಾನುಭವಿಗಳ ಸಾಲ ಮನ್ನಾ ಆಗಿದ್ದರೂ ಸಾಲ ಮರು ಪಾವತಿಸಿಕೊಂಡಿರುವ ಬಗ್ಗೆ ಸದಸ್ಯರು ಪ್ರತಿಭಟನೆ ನಡೆಸಿರುವುದು ನಿಜವೇ ; ಹಾಗಿದ್ದಲ್ಲಿ, ಈ ಪ್ರಕರಣದಲ್ಲಿ ಯಾರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಈ ಸಂಘದಲ್ಲಿ ಎಷ್ಟು ಸದಸ್ಯರಿಂದ ಮೊತ್ತದ ಷೇರುಧನವನ್ನು ಎಷ್ಟು ಸಂಗ್ರಹ ಮಾಡಲಾಗಿದೆ ; ಯಾವ್ಯಾವ ರೈತರಿಂದ ಎಷ್ಟು ಷೇರು ಧನ ಸಂಗ್ರಹಿಸಲಾಗಿದೆ ; ಪೂರ್ಣ ವಿವರ ನೀಡುವುದು ;

(ಉ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡಿರುವ ವಿಶೇಷ ಪ್ರೋತ್ಸಾಹ ಧನವನ್ನು ಈ ಸಂಘದಲ್ಲಿ ಯಾವ ಯಾವ ಸದಸ್ಯರಿಗೆ ಎಷ್ಟೆಷ್ಟು ಜಮಾ ಮಾಡಲಾಗಿದೆ ; (ಸದಸ್ಯರ ಸದಸ್ಯತ್ವ ಸಂಖ್ಯೆಯೊಂದಿಗೆ ಕಳೆದ ೫ ವರ್ಷಗಳ ಪೂರ್ಣ ವಿವರ ನೀಡುವುದು)

(ಊ) ಈ ಸಂಘವು ಪಿಗ್ಮಿ ರೂಪದಲ್ಲಿ ಸದಸ್ಯರಿಂದ ಹಣ ಸಂಗ್ರಹಿಸಿರುವುದು ನಿಜವೇ ; ಈವರೆಗೆ ಸದಸ್ಯರಿಂದ ಸಂಗ್ರಹಿಸಿರುವ ಪಿಗ್ಮಿ ಹಣ ಎಷ್ಟು ; (ಪಿಗ್ಮಿದಾರರ ವಿವರ ನೀಡುವುದು) ಈ ಹಣವನ್ನು ಸದಸ್ಯರಿಗೆ ನೀಡದೆ ವಂಚಿಸಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಋ) ಈ ಸಂಘದಿಂದ ೨೦೧೧–೧೨ನೇ ಸಾಲಿನಲ್ಲಿ ಸೂಪರ್ ಪಾಸ್ಪೇಟ್ ಎಂದು ಕಾಲ್ಸಿಮ್ಯಾಕ್ಸ್ ಮತ್ತು ಡಿಎನ್‌ಪಿ ರಸಗೊಬ್ಬರವನ್ನು ಪೂರೈಸಿರುವುದು ಸಾಬೀತಾಗಿದ್ದರೂ ಸಹ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಕ್ರಿಮಿನಲ್ ಕೇಸ್ ಹಾಕದಿರಲು ಕಾರಣವೇನು ?

## ಯಲಹಂಕದಲ್ಲಿರುವ ಡೀಸೆಲ್ ಪವರ್ ಪ್ಲಾಂಟ್

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭ (೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಯಲಹಂಕದಲ್ಲಿರುವ ಡೀಸೆಲ್ ಪವರ್ ಪ್ಲಾಂಟ್‌ನ್ನು ಗ್ಯಾಸ್ ಪವರ್ ಪ್ಲಾಂಟ್ ಆಗಿ ಬದಲಾಯಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳುವುದು ಯಾವಾಗ ; ಬದಲಾವಣೆಗೆ ನಿಗಧಿತ ಸಮಯವನ್ನು ಗೊತ್ತುಪಡಿಸಲಾಗಿದೆಯೇ ;

(ಆ) ಯಲಹಂಕ ಡೀಸೆಲ್ ಪ್ಲಾಂಟ್‌ನಿಂದ ಗ್ಯಾಸ್ ಪ್ರಾಜೆಕ್ಟ್‌ಗೆ ಬದಲಾಯಿಸುವ ಯೋಜನೆಯನ್ನು ಕೇಂದ್ರ ಸಂಸ್ಥೆಯಾದ ಬಿ.ಹೆಚ್.ಇ.ಎಲ್.ಗೆ ವಹಿಸಲು ಉದ್ದೇಶಿಸಲಾಗಿದೆಯೇ ; ಉದ್ದೇಶಿಸಿದ್ದಲ್ಲಿ ಯಾವಾಗ ವಹಿಸಲಾಯಿತು ; ಗ್ಯಾಸ್ ಪ್ಲಾಂಟ್ ಆಗಿ ಪರಿವರ್ತಿಸಲು ಬಿ.ಹೆಚ್.ಇ.ಎಲ್. ನಿಗದಿ ಮಾಡಿರುವ ಸಮಯ ಎಷ್ಟು ;

(ಇ) ಬಿಡದಿ ದಾಬೋಲ್ ಗ್ಯಾಸ್‌ಪವರ್ ಪ್ಲಾಂಟ್ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಯೋಜನೆಯ ಕಾರ್ಯ ಯಾವ ಹಂತದಲ್ಲಿದೆ ? (ವಿವರ ನೀಡುವುದು)



## ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಯ ಪುನಶ್ಚೇತನದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೮ (೨೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಯ ಪುನಶ್ಚೇತನಕ್ಕಾಗಿ ೨೦೦೦ಕ್ಕೂ ಹೆಚ್ಚು ರೈತರು ಲಿಖಿತವಾಗಿ ಕಬ್ಬು ಬೆಳೆಯಲು ಒಪ್ಪಿಗೆ ಪತ್ರವನ್ನು ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯವರಿಗೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ;

(ಆ) ರೈತರಿಗೆ ಕಬ್ಬು ಬೆಳೆಯಲು ಪೂರಕವಾಗಿ ವರಾಹಿ ನೀರಾವರಿ ಯೋಜನೆಯ ಮೂಲಕ ಪ್ರಸಕ್ತ ಸಾಲಿನ ಏಪ್ರಿಲ್ ಮಾಸದಲ್ಲಿ ರೈತರ ಕೃಷಿ ಭೂಮಿಗಳಿಗೆ ನೀರನ್ನು ಹರಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೈತರನ್ನು ಕಬ್ಬು ಬೆಳೆಸಲು ಉತ್ತೇಜಿಸುವುದರೊಂದಿಗೆ ಸಕ್ಕರೆ ಕಾರ್ಖಾನೆ ಪುನಶ್ಚೇತನಗೊಳಿಸಲು ಕೈಗೊಳ್ಳುವ ಕ್ರಮಗಳೇನು ?

## ಉಡುಪಿ ಜಿಲ್ಲೆಯ ರೈತರು ಬೆಳೆಯುವ ಭತ್ತದ ವಿಸ್ತೀರ್ಣ ಹಾಗೂ ಪ್ರಮಾಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :–

೧೯ (೨೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ರೈತರು ಒಂದು, ಎರಡು ಮತ್ತು ಮೂರನೆಯ ಬೆಳೆಯನ್ನು ಅಂದಾಜು ಎಷ್ಟು ವಿಸ್ತೀರ್ಣದಲ್ಲಿ ಭತ್ತವನ್ನು ಬೆಳೆಯುತ್ತಾರೆ ; ಈ ಮೂರು ಬೆಳೆಗಳಲ್ಲಿ ಅವರು ಬೆಳೆಯುವ ಭತ್ತದ ಪ್ರಮಾಣವೆಷ್ಟು ; (ಬೆಳೆವಾರು ಪ್ರತ್ಯೇಕವಾದ ವಿವರ ನೀಡುವುದು)

(ಆ) ಕೃಷಿಗೆ ಮಾರಕವಾಗಿರುವ ಮಂಗಗಳನ್ನು ನಿಯಂತ್ರಿಸಲು ಇಲಾಖೆ ಹಾಕಿಕೊಂಡ ಕಾರ್ಯಕ್ರಮಗಳೇನು ; ಇಲ್ಲವಾದಲ್ಲಿ, ಇನ್ನಾದರೂ ಕೈಗೊಳ್ಳುವ ಶಾಶ್ವತ ಪರಿಹಾರವೇನು ?

## ರಾಜ್ಯದಲ್ಲಿನ ತೋಟಗಾರಿಕಾ ಭೂಮಿಯ ವಿಸ್ತೀರ್ಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :–

೨೦ (೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ನಡೆಸುವ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು ; ಮತ್ತು ಅದರಲ್ಲಿ ಬೆಳೆಯುವ ವಿವಿಧ ತೋಟಗಾರಿಕಾ ಬೆಳೆಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)



(ಆ) ರಾಜ್ಯದಲ್ಲಿ ತೋಟಗಾರಿಕೆಯಲ್ಲಿ ಬಳಸಲಾಗುವ ಕೀಟನಾಶಕಗಳ ಪರೀಕ್ಷಣೆಗೆ ಇರುವ ಪ್ರಯೋಗಾಲಯಗಳು ಎಷ್ಟು ; ಮತ್ತು ಯಾವುದು ; ಮತ್ತು ಅವುಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳೆಷ್ಟು ; ಮತ್ತು ಈ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾವಯವ ಪದ್ಧತಿಯಲ್ಲಿ ತೋಟಗಾರಿಕೆ ನಡೆಸುವ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಮತ್ತು ಸಾವಯವ ಪದ್ಧತಿಯ ತೋಟಗಾರಿಕೆಗೆ ಸರ್ಕಾರ ನೀಡುವ ವಿಶೇಷ ಸೌಲಭ್ಯಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಈ) ತೋಟಗಾರಿಕಾ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೊರತೆ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು ?

## ಉಡುಪಿ ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ. ಡಿಪೋವನ್ನು ರಾಷ್ಟ್ರೀಯ ಹೆದ್ದಾರಿ ಟ್ರಕ್‌ಬೇ ನಿರ್ಮಿಸಲು ಸ್ವಾಧೀನಪಡಿಸಿಕೊಂಡಿರುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :–

೨೧ (೨೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿಯಂತರರುಗಳ ಸಂಖ್ಯೆ

ಎಷ್ಟು ; (ಅವರ ಹೆಸರು, ಹುದ್ದೆ, ವಿಳಾಸ, ಕಾರ್ಯನಿರ್ವಹಿಸುತ್ತಿರುವ ಕಛೇರಿಗಳೊಂದಿಗೆ ವಿವರ ನೀಡುವುದು)

(ಆ) ಉಡುಪಿಯಲ್ಲಿ ಸುಮಾರು ೨ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ ಹಾಗೂ ನರ್ಮ್ ಯೋಜನೆಯಡಿ ಸುಮಾರು ೬ ಕೋಟಿ ರೂಪಾಯಿ ಅನುದಾನ ಬಿಡುಗಡೆಗೊಂಡಿರುವ ಕೆ.ಎಸ್.ಆರ್.ಟಿ.ಸಿ. ಡಿಪೋವನ್ನು ರಾಷ್ಟ್ರೀಯ ಹೆದ್ದಾರಿಯ ಟ್ರಕ್‌ಬೇ ನಿರ್ಮಿಸಲು ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿರುವುದು ನಿಜವೇ ; ಹಾಗಿದ್ದಲ್ಲಿ, ಉದ್ದೇಶಿಸಿರುವ ಅಭಿಯಂತರರುಗಳು ಯಾರು ; ಸದರಿ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ;

(ಇ) ಕೆ.ಎಸ್.ಆರ್.ಟಿ.ಸಿ. ಡಿಪೋವನ್ನು ಸ್ವಾಧೀನಪಡಿಸಿಕೊಂಡು ಟ್ರಕ್‌ಬೇ ನಿರ್ಮಿಸುವ ಉದ್ದೇಶವನ್ನು ಕೈಬಿಡುವ ಬಗ್ಗೆ ಸರ್ಕಾರದ ನಿಲುವೇನು ?

## ಮಹಿಳಾ ಸಹಕಾರಿ ಬ್ಯಾಂಕ್‌ಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೨ (೨೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಸಂಘಗಳ ಅಡಿಯಲ್ಲಿ ಬರುವ ಮಹಿಳಾ ಸಹಕಾರಿ ಬ್ಯಾಂಕ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಹಿಳಾ ಸಹಕಾರಿ ಬ್ಯಾಂಕ್‌ಗಳಲ್ಲಿ ಚುನಾವಣೆಗಳನ್ನು ನಿಗದಿತ ಸಮಯದಲ್ಲಿ ನಡೆಸಲಾಗುತ್ತಿದೆಯೇ ; (ವಿವರವಾದ ಮಾಹಿತಿಯನ್ನು ಒದಗಿಸುವುದು)



(ಇ) ಮಹಿಳಾ ಸಹಕಾರಿ ಬ್ಯಾಂಕ್‌ಗಳ ಅಭಿವೃದ್ಧಿಗಾಗಿ ಹೊಸದಾಗಿ ಯೋಜನೆಗಳನ್ನು ರೂಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಕಬ್ಬನ್‌ಪಾರ್ಕ್ ಖಾಸಗೀಕರಣ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೩ (೨೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಬ್ಬನ್‌ಪಾರ್ಕ್ ಉದ್ಯಾನವನ ನಿರ್ವಹಣೆಯ ಜವಾಬ್ದಾರಿಗಳನ್ನು ಸರ್ಕಾರದ ಬದಲಿಗೆ ಖಾಸಗಿ ಸದಸ್ಯರ ಸಮಿತಿಗೆ ಅಥವಾ ಮತ್ಯಾವುದಾದರೂ ವ್ಯವಸ್ಥೆಗೆ ಒಳಪಡಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಕಾರಣಗಳೇನು ;

(ಆ) ಹಾಲಿ ಸರ್ಕಾರದ ನಿರ್ವಹಣೆಯು ವ್ಯವಸ್ಥೆಯನ್ನೇ ಮುಂದುವರಿಸಲು ಸರ್ಕಾರಕ್ಕೆ ಇರುವ ತೊಡಕುಗಳೇನು ;

(ಇ) ಕಬ್ಬನ್‌ಪಾರ್ಕ್ ಜಮೀನು ಒತ್ತುವರಿಯಾಗಿದೆಯೇ ; ಆಗಿದ್ದಲ್ಲಿ ವಿವರಗಳನ್ನು ನೀಡುವುದು ?

## ಚೀಟಿ ಅವ್ಯವಹಾರ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೪ (೨೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೨ರ ಚೀಟಿ ವಿಧಿ ಕಾಯಿದೆಯಡಿಯಲ್ಲಿ, ರಾಜ್ಯದಲ್ಲಿ ಪರವಾನಗಿ ಪಡೆದ ಚೀಟಿ ಸಂಸ್ಥೆ/ವ್ಯಕ್ತಿಗಳ ಸಂಖ್ಯೆ ಎಷ್ಟು ; ಅನಧಿಕೃತ ಚೀಟಿ ಸಂಸ್ಥೆ/ವ್ಯಕ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪರವಾನಗಿ ಪಡೆಯದೆ, ರಾಜ್ಯದಲ್ಲಿ ಖಾಸಗಿಯಾಗಿ ಕೆಲ ಸಂಸ್ಥೆಗಳು/ ವ್ಯಕ್ತಿಗಳು ಚೀಟಿ ವ್ಯವಹಾರ ಮಾಡುತ್ತಾ, ಸಾರ್ವಜನಿಕರಿಗೆ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅನಧಿಕೃತವಾಗಿ ಚೀಟಿ ಮಾಡುತ್ತಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅನಧಿಕೃತ ಲೇವಾದೇವಿಗಾರರ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೫ (೨೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೬೧ನೇ ಸಾಲಿನ ಕರ್ನಾಟಕ ಲೇವಾದೇವಿ ಅಧಿನಿಯಮದಡಿ ರಾಜ್ಯದಲ್ಲಿ ಪರವಾನಗಿ ಪಡೆದ ಹಣ ಲೇವಾದೇವಿಗಾರರ (Moneylenders) ಸಂಖ್ಯೆ ಎಷ್ಟು ; ಅನಧಿಕೃತ ಲೇವಾದೇವಿಗಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಪರವಾನಗಿ ಪಡೆಯದ ಖಾಸಗಿ ಲೇವಾದೇವಿಗಾರರು ಅಧಿಕ ಬಡ್ಡಿಯನ್ನು ವಿಧಿಸಿ ಸಾರ್ವಜನಿಕರಿಗೆ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಿತಿ ಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ ಜಾರಿಯಲ್ಲಿದ್ದಾಗ್ಯೂ, ಅಧಿಕ ಬಡ್ಡಿ ತೆಗೆದುಕೊಳ್ಳುವ ಮತ್ತು ಅನಧಿಕೃತ ಲೇವಾದೇವಿಗಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಸಹಕಾರ ಕ್ಷೇತ್ರದಲ್ಲಿ ಮಹಿಳೆಯರ ಸಕ್ರಿಯ ಪಾಲ್ಗೊಳ್ಳುವಿಕೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨೬ (೨೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಕ್ಷೇತ್ರದಲ್ಲಿ ಮಹಿಳೆಯರು ಸಕ್ರಿಯವಾಗಿ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ "ಪ್ರಿಯದರ್ಶಿನಿ" ಯೋಜನೆಯಡಿ ಸರ್ಕಾರ ಷೇರುಧನವನ್ನು ನೀಡಿ ಎಷ್ಟು ಮಹಿಳೆಯರನ್ನು ರಾಜ್ಯದಲ್ಲಿ ಈವರೆಗೆ ವಿವಿಧ ಸಹಕಾರಿ ಸಂಘ/ ಸಂಸ್ಥೆಗಳಲ್ಲಿ ಸದಸ್ಯರನ್ನಾಗಿ ನೋಂದಾಯಿಸಿದೆ ; (ಸಂಘಗಳ ಹೆಸರಿನೊಡನೆ, ಜಿಲ್ಲಾವಾರು ಸಂಖ್ಯೆ ವಿವರ ನೀಡುವುದು)

(ಆ) ಯೋಜನೆಯ ಪ್ರಚಾರವಿಲ್ಲದೆ, ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಈ ಲಾಭವನ್ನು ಪಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಹಕಾರ ಕ್ಷೇತ್ರದಲ್ಲಿ ಮಹಿಳೆಯರು ಅತೀ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಹಮ್ಮಿಕೊಳ್ಳಲಿದೆ ?

## ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭ (೩೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭಾಗ್ಯ ಯೋಜನೆಗೆ ಮೀಸಲಿರುವ ಅನುದಾನದ ಮೊತ್ತ ; (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗೆ ವಿನಿಯೋಗಿಸಿದ ಮೊತ್ತವೆಷ್ಟು (ಜಿಲ್ಲಾವಾರು ವಿವರ ನೀಡುವುದು) ಕೃಷಿ ಭಾಗ್ಯ ಯೋಜನೆಗೆ ಯಾವ ಯಾವ ಪ್ರಯೋಜನೆಗಳು ದೊರೆಯಲಿವೆ ; (ಯೋಜನೆಯ ಪೂರ್ಣ ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕೃಷಿ ಭಾಗ್ಯ ಯೋಜನೆ ಜಾರಿಯಲ್ಲಿದೆಯೇ ;

(ಈ) ಇಲ್ಲವಾದಲ್ಲಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಇರುವ ತೊಡಕುಗಳೇನು ; (ವಿವರ ನೀಡುವುದು)

(ಉ) ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಸಹಕಾರ ಇಲಾಖೆಯಿಂದ ಮಹಿಳಾಪರ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮ (೩೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಸಹಕಾರ ಇಲಾಖೆಯ ಮೂಲಕ ಅನುಷ್ಠಾನಗೊಳ್ಳಲಿರುವ ಮಹಿಳಾ ಪರ ಯೋಜನೆಗಳಾವುವು ; (ವಿವರ ನೀಡುವುದು)

(ಆ) ೨೦೧೪–೧೫ನೇ ಸಾಲಿನಲ್ಲಿ ನಿಗದಿ ಪಡಿಸಿರುವ ಅನುದಾನ ಮತ್ತು ವಿನಿಯೋಗಿಸಲಾಗಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಮಹಿಳಾ ಸಹಕಾರ ಸಂಘಗಳ ಪುನಃಶ್ಚೇತನ ಮತ್ತು ಬಲವರ್ಧನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ಪೂರ್ಣ ವಿವರ ನೀಡುವುದು)



## ಶಿರಾಡಿ ಘಾಟ್ ರಸ್ತೆಯನ್ನು ಚತುಷ್ಪತ ರಸ್ತೆಯನ್ನಾಗಿ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯ (೩೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾಡಿ ಘಾಟ್ ರಸ್ತೆ ಅಭಿವೃದ್ಧಿ ಕಾಮಗಾರಿಯ ಒಟ್ಟು ಅಂದಾಜು ಮೊತ್ತವೆಷ್ಟು ;

(ಆ) ಯಾವ ಇಲಾಖೆ ಮೂಲಕ ಈ ಕಾಮಗಾರಿ ನಡೆಯುತ್ತಿದೆ ;

(ಇ) ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು; ಅವರ ವಿಳಾಸವೇನು ;

(ಈ) ಕಾಮಗಾರಿಯ ಒಟ್ಟು ವಿವರಗಳೇನು ;

(ಉ) ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು ;

(ಊ) ಸದರಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಮೂಲಕ ಚತುಷ್ಪತ ರಸ್ತೆ ಕಾಮಗಾರಿಯನ್ನು ಕೈಬಿಡಲಾಗುತ್ತಿದೆಯೇ ;

(ಋ) ಚತುಷ್ಪತ ರಸ್ತೆ ಕಾಮಗಾರಿಯ ಪೂರ್ಣ ವಿವರ ನೀಡುವುದು ?

## ಶಾಧೀ ಭಾಗ್ಯ ಯೋಜನೆಯ ವರ್ಷವಾರು ವಿವರ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦ (೩೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೨೦೧೫ನೇ ಸಾಲಿನಲ್ಲಿ "ಶಾಧೀ ಭಾಗ್ಯ" ಯೋಜನೆಗೆ ಮೀಸಲಿರಿಸಿದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಾಧೀ ಭಾಗ್ಯ ಯೋಜನೆ ಯಾವ–ಯಾವ ಜಾತಿ ಮತ್ತು ವರ್ಗಗಳಿಗೆ ಅನ್ವಯವಾಗುತ್ತದೆ ; ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಳೆದ ಎರಡು ವರ್ಷಗಳಲ್ಲಿ ಶಾಧೀ ಭಾಗ್ಯ ಯೋಜನೆಗೆ ವಿನಿಯೋಗಿಸಿದ ಮೊತ್ತವೆಷ್ಟು ? (ಜಿಲ್ಲಾವಾರು ಜಾತಿ/ವರ್ಗವಾರು ವಿವರ ನೀಡುವುದು)

## ಕೃಷಿ ಯಂತ್ರೋಪಕರಣಗಳ ಸಹಾಯಧನ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೧ (೩೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಇಲಾಖೆ ವತಿಯಿಂದ ರೈತರಿಗೆ ಒದಗಿಸುವ ಕೃಷಿ ಯಂತ್ರೋಪಕರಣ ಹಾಗೂ ವಾಹನ ಖರೀದಿಗೆ



ನೀಡಲಾಗುತ್ತಿರುವ ಸಹಾಯಧನದ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಯಾವ ಯೋಜನೆ ಅಡಿ ಯಂತ್ರೋಪಕರಣ ಹಾಗೂ ವಾಹನಗಳನ್ನು ಖರೀದಿಸಬಹುದು ; ಇದಕ್ಕೆ ಎಷ್ಟು ಸಹಾಯಧನ ದೊರೆಯುತ್ತದೆ ;

(ಇ) ಸರ್ಕಾರದಿಂದ ಕಳೆದ ೨ ವರ್ಷದಲ್ಲಿ ಎಷ್ಟು ಸಹಾಯಧನ ಕೃಷಿಕರಿಗೆ ವಿತರಣೆ ಆಗಿದೆ ; (ವರ್ಷವಾರು ವಿವರ ನೀಡುವುದು)

(ಈ) ಸಹಾಯಧನ ನೀಡಿಕೆಯಲ್ಲಿ ವಿಳಂಬವಾಗುತ್ತಿರುವುದರಿಂದ ತ್ವರಿತವಾಗಿ ಸಹಾಯಧನ ವಿತರಿಸಲು ಕೈಗೊಳ್ಳುವ ಕ್ರಮಗಳೇನು ;

(ಉ) ಸಹಾಯಧನ ನೀಡುವಾಗ ಫಲಾನುಭವಿಗಳನ್ನು ಆಯ್ಕೆಮಾಡಲು ಅನುಸರಿಸುತ್ತಿರುವ ಮಾನದಂಡಗಳಾವುವು ;

(ಊ) ಈಗಾಗಲೇ ಈ ಸೌಲಭ್ಯದ ಸದುಪಯೋಗ ಪಡೆದುಕೊಂಡಿರುವ ರೈತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಅಂಕಿ ಅಂಶ ನೀಡುವುದು)

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಾರ್ಷಿಕ ವಿದ್ಯಾರ್ಥಿ ವೇತನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೨ (೩೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನಗಳ ವಿವರಗಳು ಹಾಗೂ ಕಳೆದ ೨ ವರ್ಷಗಳಲ್ಲಿ

ರಾಜ್ಯದಲ್ಲಿ ವಿತರಿಸಲಾದ ವಿದ್ಯಾರ್ಥಿ ವೇತನದ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರಗಳು ಮತ್ತು ಫಲಾನುಭವಿ ವಿದ್ಯಾರ್ಥಿಗಳ ಹೆಸರು ಹಾಗೂ ಸಂಖ್ಯೆಗಳನ್ನು ನೀಡುವುದು ;

(ಆ) ಅಲ್ಪಸಂಖ್ಯಾತರು ಶೈಕ್ಷಣಿಕವಾಗಿ ಮುನ್ನಡೆ ಸಾಧಿಸಲು ರೂಪಿಸಿರುವ ಯೋಜನೆಗಳಾವುವು ; ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೈಗೊಂಡಿರುವ ಕ್ರಮವೇನು ;

(ಇ) ಅಲ್ಪಸಂಖ್ಯಾತರ ಹೆಣ್ಣುಮಕ್ಕಳ ಕುರಿತಾದ ಶೈಕ್ಷಣಿಕ ಅಭಿವೃದ್ಧಿ ಯೋಜನೆಗಳು ಮತ್ತು ಅವುಗಳ ಅನುಷ್ಠಾನ ಕುರಿತಾದ ವಿವರ ನೀಡುವುದು ;

(ಈ) ರಾಜ್ಯದಲ್ಲಿ ವಿದ್ಯಾರ್ಥಿನಿಲಯಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು ?

## ತುಮಕೂರು ಜಿಲ್ಲೆಯಲ್ಲಿ ಹೊಸ ಪರಿವರ್ತಕಗಳ ಸರಬರಾಜು ಬಗ್ಗೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೩(೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಿದ ನಂತರ ಅದಕ್ಕೆ ತಕ್ಕಂತೆ ವಿದ್ಯುತ್ ಪರಿವರ್ತಕಗಳನ್ನು ಹೆಚ್ಚುವರಿ ಮಾಡದೇ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ಸಾಕಷ್ಟು ಪರಿವರ್ತಕಗಳ ಪೂರೈಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ತುಮಕೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ವ್ಯಾಪ್ತಿಯ ಗ್ರಾಮಗಳಲ್ಲಿ ಸುಟ್ಟಿರುವ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪರಿವರ್ತಕಗಳು ಪದೇ ಪದೇ ಕೆಟ್ಟು ಹೋಗುತ್ತಿದ್ದರೂ ಪರಿವರ್ತಕಗಳ ಗುಣಮಟ್ಟದ ದುರಸ್ಥಿ ಕುರಿತು ಸರ್ಕಾರ ಗಮನಹರಿಸದಿರಲು ಕಾರಣವೇನು ; ಈ ಬಗ್ಗೆ ಖರೀದಿ ಕಂಪನಿ ಹಾಗೂ ದುರಸ್ಥಿದಾರರಿಂದ ಗ್ಯಾರಂಟಿ ಪಡೆಯಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಎಷ್ಟು ವರ್ಷದ ಗ್ಯಾರಂಟಿ ನೀಡಲಾಗುವುದು ; ಉತ್ತಮ ಪರಿವರ್ತಕ ನೀಡಲು ತೆಗೆದುಕೊಂಡ ಕ್ರಮಗಳೇನು ?

## ವಿಶೇಷ ಅನುದಾನ ಬಿಡುಗಡೆಯಾದ ಬಗ್ಗೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೩೪ (೩೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩, ೨೦೧೩–೧೪ರ ಆಯವ್ಯಯದಲ್ಲಿ ಲೋಕೋಪಯೋಗಿ ಇಲಾಖೆಗೆ ನೀಡಿರುವ ಹಣ ಎಷ್ಟು ; (ಪ್ರತ್ಯೇಕ ವಿವರ ನೀಡುವುದು)

(ಆ) ಆಯವ್ಯಯದಲ್ಲಿ ನೀಡಿರುವ ಹಣ ಹೊರತಾಗಿ, ಮುಖ್ಯಮಂತ್ರಿಗಳ ಹಾಗೂ ಮಂತ್ರಿಗಳ ವಿಶೇಷ ಅನುದಾನದಡಿ ಯಾವ್ಯಾವ ಕ್ಷೇತ್ರಕ್ಕೆ ಎಷ್ಟೆಷ್ಟು ಹಣ ನೀಡಲಾಗಿದೆ ; (ಕಳೆದೆರಡು ವರ್ಷಗಳ ಕ್ಷೇತ್ರವಾರು ವಿವರ ನೀಡುವುದು)

(ಇ) ವಿಶೇಷ ಅನುದಾನ ಮಂಜೂರಾತಿಗೆ ಬೇಕಿರುವ ಮಾನದಂಡವೇನು ?

## ರಾಜ್ಯದಲ್ಲಿನ ವಿದ್ಯುತ್ ಸರಬರಾಜು ಕಂಪನಿಗಳ ಕುರಿತು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೫ (೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿದ್ಯುತ್ ಸರಬರಾಜು ಕಂಪನಿಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಈ ಕಂಪನಿಗಳು ೨೦೧೧–೧೨, ೨೦೧೨–೧೩, ೨೦೧೩–೧೪, ೨೦೧೪–೧೫ರ ಸಾಲಿಗೆ ಟೆಂಡರ್ ಮುಖಾಂತರ ಎಷ್ಟು ಆರ್.ಸಿ.ಸಿ. ವಿದ್ಯುತ್ ಕಂಬಗಳನ್ನು ಖರೀದಿಸಿ ಸರಬರಾಜು ಮಾಡಿವೆ ; ವಿವರಗಳು ಹಾಗೂ ಪ್ರತಿಯೊಂದು ವಿದ್ಯುತ್ ಕಂಬಕ್ಕೆ ತಗಲಿದ ದರ ಎಷ್ಟು ? (ಗುತ್ತಿಗೆದಾರರು, ವಿದ್ಯುತ್ ಕಂಪನಿವಾರು, ವರ್ಷವಾರು, ಮಾಹಿತಿ ಒದಗಿಸುವುದು)



## ಸೌರ ನಗರದ ಯೋಜನೆಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೬ (೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಕೊರತೆ ನೀಗಿಸುವ ದೃಷ್ಟಿಯಿಂದ ಕೇಂದ್ರ/ರಾಜ್ಯ ಸರ್ಕಾರದ ಸೌರ ನಗರದ ಯೋಜನೆಯನ್ನು ಕೈಗೆತ್ತಿಕೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಯಾವ ಯಾವ ನಗರಗಳನ್ನು ಈ ಯೋಜನೆಯ ವ್ಯಾಪ್ತಿಗೆ ಒಳಪಡಿಸಲಾಗಿದೆ ;

(ಇ) ಸೂರ್ಯನಗರಿಯೆಂದು ಖ್ಯಾತಿ ಪಡೆದ ಕಲ್ಬುರ್ಗಿ ಮಹಾನಗರವನ್ನು ಈ ಯೋಜನೆಯಡಿಯಲ್ಲಿ ಒಳಪಡಿಸದಿರಲು ಕಾರಣಗಳೇನು ; ಹೈದರಾಬಾದ್–ಕರ್ನಾಟಕ ಪ್ರದೇಶದ ಜಿಲ್ಲಾ ಕೇಂದ್ರಗಳನ್ನು ಸೌರನಗರವೆಂದು ಅಭಿವೃದ್ಧಿಪಡಿಸಲು ಸರ್ಕಾರ ಯೋಚಿಸಿದೆಯೇ ; (ವಿವರ ಒದಗಿಸುವುದು)

(ಈ) ಈ ಯೋಜನೆ ಕೈಗೆತ್ತಿಕೊಳ್ಳಲು ಇರುವ ಮಾನದಂಡಗಳೇನು ? (ವಿವರ ಒದಗಿಸುವುದು)

## ಹೈದರಾಬಾದ್–ಕರ್ನಾಟಕ ಜಿಲ್ಲೆಗಳ ರಸ್ತೆ ಅಭಿವೃದ್ಧಿ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೭ (೫೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಜಿಲ್ಲೆಗಳ ರಸ್ತೆಗಳ ಅಭಿವೃದ್ಧಿಗಾಗಿ ಇಲಾಖೆಯು ಕಳೆದ ೩ ವರ್ಷಗಳಲ್ಲಿ ಬಿಡುಗಡೆ ಮಾಡಿದ

ಅನುದಾನವೆಷ್ಟು ; (ಜಿಲ್ಲಾವಾರು, ವರ್ಷವಾರು ರಸ್ತೆಗಳ ವಿವರ ಸಮೇತ ಮಾಹಿತಿ ಒದಗಿಸುವುದು)

(ಆ) ಈ ಭಾಗದಲ್ಲಿ ರಸ್ತೆಗಳು ಹದಗೆಟ್ಟಿದ್ದು, ಇವುಗಳ ದುರಸ್ತಿಗಾಗಿ ಕಳೆದ ೩ ವರ್ಷದಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು ? (ರಸ್ತೆವಾರು ವಿವರ ಒದಗಿಸುವುದು)

## ಬೆಣ್ಣೆತೋರಾ ನದಿಗೆ ಅಡ್ಡಲಾಗಿ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೮ (೭೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಹುಮ್ನಾಬಾದ್ ರಾಷ್ಟ್ರೀಯ ಹೆದ್ದಾರಿ ೨೧೮ ಮಾರ್ಗದಲ್ಲಿ ಕುರಕೋಟಾ ಗ್ರಾಮದ ಹತ್ತಿರ ಬೆಣ್ಣೆತೋರಾ ನದಿಗೆ ಅಡ್ಡಲಾಗಿ ಹೊಸ ಸೇತುವೆ ನಿರ್ಮಾಣ ಕಾಮಗಾರಿ ಪ್ರಾರಂಭಿಸಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಮತ್ತೆ ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಅರ್ಧಕ್ಕೆ ಸ್ಥಗಿತಗೊಂಡಿರುವ ಈ ಹೊಸ ಸೇತುವೆ ಕಾಮಗಾರಿಯಿಂದ ನದಿಯ ನೀರಿನ ಹರಿವಿಗೆ ತಡೆಯುಂಟಾಗಿದ್ದು ನೀರು ಹರಿಯದೆ ದಡದಲ್ಲಿರುವ ಗ್ರಾಮಗಳಿಗೆ ಮತ್ತು ಹೊಲಗಳಿಗೆ ನುಗ್ಗಿ ಆಸ್ತಿಪಾಸ್ತಿ ಹಾಗೂ ಬೆಳೆಗೆ ಹಾನಿಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ನದಿಯ ನೀರಿನ ಹರಿವು ಮಧ್ಯೆ ತಡೆಗೋಡೆಯಂತೆ ನಿಂತಿದ್ದ ಈ ಅಪೂರ್ಣ ಕಾಮಗಾರಿಯನ್ನು



ತೆರವುಗೊಳಿಸಿ ನೀರಿನ ಹರಿವಿಗೆ ಅನುವು ಮಾಡಿಕೊಡಲು ಸರ್ಕಾರ ಮುಂದಾಗುವುದೇ ; ಈ ಬಗ್ಗೆ ಸರ್ಕಾರದ ಮುಂದಿರುವ ತ್ವರಿತ ಕ್ರಮಗಳೇನು ? (ವಿವರ ನೀಡುವುದು)

## ಕರಾವಳಿ ಕರ್ನಾಟಕದಲ್ಲಿ 'ಮಲ್ಲಿಗೆ' ಕೃಷಿಯನ್ನು ಪ್ರೋತ್ಸಾಹಿಸುವ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೯ (೬೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಕರ್ನಾಟಕದಲ್ಲಿ ವಾಣಿಜ್ಯ ಬೆಳೆಯಾಗಿ ಬೆಳೆಸುತ್ತಿರುವ "ಮಲ್ಲಿಗೆ ಕೃಷಿಯನ್ನು" ಪ್ರೋತ್ಸಾಹಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಆ) ಮಲ್ಲಿಗೆ ಕೃಷಿಯನ್ನು ವಿಸ್ತರಿಸಲು ಮತ್ತು ರೋಗವನ್ನು ತಡೆಗಟ್ಟಲು ಕರಾವಳಿ ಕರ್ನಾಟಕದಲ್ಲಿ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ ; ಮಲ್ಲಿಗೆ ಕೃಷಿಯನ್ನು ಪ್ರೋತ್ಸಾಹಿಸಲು ಮಲ್ಲಿಗೆ ಕೃಷಿ ಮಂಡಳಿಯನ್ನು ರಚನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಎಕರೆಗಳಲ್ಲಿ ಮಲ್ಲಿಗೆ ಕೃಷಿಯನ್ನು ಬೆಳೆಸಲಾಗುತ್ತದೆ ಸರ್ಕಾರದಿಂದ ಎಷ್ಟು ಅನುದಾನ ನೀಡಲಾಗಿದೆ ;

(ಈ) ಮಾರುಕಟ್ಟೆ ಬೆಲೆ ನಿಗದಿಗೊಳಿಸಲು ಮತ್ತು ಮಾರಾಟಕ್ಕೆ ಪ್ರೋತ್ಸಾಹ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಸರ್ಕಾರದ ವತಿಯಿಂದ ಮಾರಾಟಕ್ಕೆ ಬೆಂಬಲ ನೀಡಲು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಲ್ಲಿಗೆ ಮಾರಾಟ ಮಾಡಲು ವ್ಯವಸ್ಥೆ ಮಾಡಲಾಗಿದೆಯೇ ?

## ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬಗೊಂಡಿರುವ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೪೦ (೬೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಸುರತ್ಕಲ್ ಎನ್.ಐ.ಟಿ.ಕೆ ಯಿಂದ ಬಿ.ಸಿ ರೋಡ್‌ವರೆಗಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬಗೊಳ್ಳಲು ಕಾರಣವೇನು ; ದೋಷಪೂರಿತ ಓವರ್‌ಬ್ರಿಡ್ಜ್ ರಚನೆ ಮಾಡಿದ ಬಗ್ಗೆ ತನಿಖೆ ನಡೆಸಲಾಗಿದೆಯೇ ;

(ಆ) ಕಳೆದ ೧೦ ವರ್ಷಗಳಿಂದ ಮೇಲಿನ ಕಾಮಗಾರಿ ಅನುಷ್ಠಾನಗೊಳ್ಳದೇ ಅಪಘಾತಗಳ ಸಂಖ್ಯೆ ಹೆಚ್ಚಾಗಿದ್ದು ನೂರಾರು ಜನರು ಪ್ರಾಣವನ್ನು ಕಳೆದುಕೊಂಡಿರುವುದರಿಂದ ಸಂತ್ರಸ್ಥರಿಗೆ ಇಲಾಖೆಯ ವತಿಯಿಂದ ಪರಿಹಾರ ನೀಡಲಾಗಿದೆಯೇ ;

(ಇ) ಮಂಗಳೂರು ನಗರದ ಸರ್ಕಿಟ್ ಹೌಸ್‌ನಿಂದ ಅಂತರರಾಷ್ಟ್ರಿಯ ವಿಮಾನ ನಿಲ್ದಾಣದ ರಸ್ತೆಯು ಮರಕಡದಿಂದ ಮುಂದಕ್ಕೆ ಕಾಮಗಾರಿ ಸ್ಥಗಿತಗೊಂಡಿರಲು ಕಾರಣವೇನು ; ಕಿರಿದಾದ ರಸ್ತೆಯಿಂದ ಅಪಘಾತಗಳ ಸಂಖ್ಯೆ: ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ನಗರದ ಸರ್ಕಿಟ್ ಹೌಸ್‌ನಿಂದ ರಾಜ್ಯ ಹೆದ್ದಾರಿ ವಿಮಾನ ನಿಲ್ದಾಣ ರಸ್ತೆಗೆ ದಾಟಲು ಅಂಡರ್ ಪಾಸ್ ಅಥವಾ ಓವರ್‌ಬ್ರಿಡ್ಜ್ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ರಾಷ್ಟ್ರೀಯ ಹೆದ್ದಾರಿ ೬೬ ನಂತೂರು ಜಂಕ್ಷನ್‌ನಲ್ಲಿ ಅವೈಜ್ಞಾನಿಕವಾಗಿ ಸರ್ಕಲ್ ರಚನೆ ಮಾಡಿದ್ದು ಅನೇಕ ಅಪಘಾತಗಳು ಸಂಭವಿಸಿ



ಪ್ರಾಣ ಕಳೆದುಕೊಂಡಿದ್ದರೂ ಅಪಘಾತ ತಪ್ಪಿಸಲು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು ; ಈ ಬಗ್ಗೆ ಕೈಗೊಳ್ಳಲಿರುವ ಕ್ರಮದ ಬಗ್ಗೆ ವಿವರ ನೀಡುವುದು ?

## ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್‌ನ್ನು "ಕ್ರೈಸ್ತ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ" ಎಂದು ರಚನೆ ಮಾಡುವ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೪೧ (೫೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಅಲ್ಪಸಂಖ್ಯಾತ ಪರಿಷತ್ ಯೋಜನೆಯಡಿಯಲ್ಲಿ ೨೦೧೨ರಿಂದ ೨೦೧೪ರವರೆಗೆ ಬಿಡುಗಡೆ ಮಾಡಿದ ಒಟ್ಟು ಅನುದಾನ ಎಷ್ಟು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ/ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಸಮುದಾಯ ಭವನಗಳಿಗೆ ಅನುದಾನ ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್‌ನ್ನು **"ಕ್ರೈಸ್ತ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ"** ಎಂದು ರಚನೆ ಮಾಡದೇ ಇರಲು ಕಾರಣಗಳೇನು ;

(ಈ) ಕ್ರೈಸ್ತ ಅಲ್ಪಸಂಖ್ಯಾತ ಪರಿಷತ್ ವತಿಯಿಂದ ಕ್ರೈಸ್ತ ಅಲ್ಪಸಂಖ್ಯಾತರಿಗಾಗಿ ಮೀಸಲಿಟ್ಟ ಅನುದಾನವು ಆ ಸಮುದಾಯದ ನೈಜ ಬೇಡಿಕೆದಾರರಿಗೆ ನೀಡದಿರುವ ಬಗ್ಗೆ ಎಷ್ಟು ದೂರುಗಳು ಬಂದಿವೆ ; (ವಿವರ ನೀಡುವುದು)

(ಉ) ಕ್ರೈಸ್ತ ಅಭಿವೃದ್ಧಿ ಪರಿಷತ್‌ನಲ್ಲಿ ಎಷ್ಟು ಮಂದಿ ಸಮಿತಿ ಸದಸ್ಯರು ಇದ್ದಾರೆ ; (ಸದಸ್ಯರ ವಿವರ ನೀಡುವುದು)

(ಊ) ೨೦೧೨–೧೩ರಿಂದ ಈವರೆಗೆ ಎಷ್ಟು ಸಮಿತಿ ಸಭೆಗಳನ್ನು ನಡೆಸಲಾಗಿದೆ ; ಅರ್ಜಿದಾರರಿಗೆ ಬಿಡುಗಡೆಗೊಳಿಸಲಾದ ಒಟ್ಟು ಅನುದಾನದ ವಿವರ ನೀಡುವುದು ?

## ಅಲ್ಪಸಂಖ್ಯಾತರ ಆಯೋಗಕ್ಕೆ ನೀಡಿದ ದೂರನ್ನು ವಿಚಾರಣೆಯ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೪೨ (೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಆಯೋಗಕ್ಕೆ ನೀಡಿರುವ ದೂರನ್ನು ವಿಚಾರಣೆ ಮಾಡಲು ಅದಕ್ಕೆ ಅರೆನ್ಯಾಯಿಕ ಅಧಿಕಾರವನ್ನು ನೀಡದೇ ಇರಲು ಕಾರಣಗಳೇನು ;

(ಆ) ಅಲ್ಪಸಂಖ್ಯಾತರ ಆಯೋಗಕ್ಕೆ ಬಂದ ದೂರುಗಳು ಪ್ರಸ್ತುತ ಯಾವ ರೀತಿ ಇತ್ಯರ್ಥಗೊಳಿಸಲಾಗುತ್ತಿದೆ ; ಕಾನೂನು ಚೌಕಟ್ಟಿನಲ್ಲಿ ಅದಕ್ಕೆ ಇರುವ ಅಧಿಕಾರಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಇರುವ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕರಾವಳಿ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಮೇಲೆ ಮತೀಯ ದ್ವೇಷದಿಂದ ಉಂಟಾದ ಗಲಭೆಗಳಲ್ಲಿ ಎಷ್ಟು ಕೇಸುಗಳನ್ನು ದಾಖಲು ಮಾಡಲಾಗಿದೆ ; ಈ ಪ್ರಕರಣಗಳ ಇತ್ಯರ್ಥಕ್ಕೆ ವಿಶೇಷ ನ್ಯಾಯಾಲಯಗಳನ್ನು ರಚಿಸಲಾಗಿದೆಯೇ ;



(ಉ) ೨೦೧೧–೧೨ ರಿಂದ ೨೦೧೩–೧೪ರವರೆಗೆ ಕೋಮು ದ್ವೇಷದ ಘರ್ಷಣೆಯಿಂದ ಉಂಟಾದ ಆಸ್ತಿಪಾಸ್ತಿಗಳ ನಷ್ಟ ಎಷ್ಟು ; (ವಿವರ ನೀಡುವುದು) ;

(ಊ) ಅಲ್ಪಸಂಖ್ಯಾತ ಇಲಾಖೆಯಿಂದ ಅನುದಾನವನ್ನು ಆಯಾ ಜಿಲ್ಲೆಯ ಜನಸಂಖ್ಯಾಗನುಗುಣವಾಗಿ ಒದಗಿಸಲಾಗುತ್ತಿದೆಯೇ ; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುತ್ತಿರುವ ಮಾನದಂಡವೇನು ? (ವಿವರ ನೀಡುವುದು)

## ವಿದ್ಯುತ್ ಉತ್ಪಾದನೆಗೆ ಕೈಗೊಂಡಿರುವ ಯೋಜನೆಗಳ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೪೩ (೫೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಉತ್ಪಾದಿಸುವ ವಿದ್ಯುತ್ ಎಷ್ಟು ; ಹೊರ ರಾಜ್ಯಗಳಿಂದ ಬೇಡಿಕೆ ಪೂರೈಸಲು ಖರೀದಿಸಿದ ವಿದ್ಯುತ್ ಎಷ್ಟು; ವಿದ್ಯುತ್ ಉತ್ಪಾದನೆಗೆ ಕೈಗೊಂಡಿರುವ ಯೋಜನೆಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ವಿದ್ಯುತ್ ಸಂಪರ್ಕಕ್ಕಾಗಿ ಬೇಡಿಕೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಗೃಹ, ವಾಣಿಜ್ಯ, ಕೈಗಾರಿಕೆ) ಆ ಪೈಕಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಗ್ರಾಮ ಪಂಚಾಯತ್‌ಗಳ ವಿದ್ಯುತ್ ಸ್ಥಾವರಕ್ಕೆ ವಾಣಿಜ್ಯ ದರವನ್ನು ವಿಧಿಸುವುದು ಸಮಂಜಸವೇ ; ಗ್ರಾಮ ಪಂಚಾಯತ್‌ಗಳಿಗೆ ಸಬ್ಸಿಡಿ ದರದಲ್ಲಿ ವಿದ್ಯುತ್‌ನ್ನು ಪೂರೈಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ವಿದ್ಯುತ್ ಕಳ್ಳತನದ ಪ್ರಕರಣಗಳಲ್ಲಿ ವಸೂಲಿ ಮಾಡಲಾದ ಮೊತ್ತವೆಷ್ಟು ; ಕಳ್ಳತನ ತಡೆಯಲು ಮತ್ತು ಶಿಕ್ಷೆ ವಿಧಿಸಲು ಶೀಘ್ರ ನ್ಯಾಯಾಲಯಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಕರ್ನಾಟಕ ವಿದ್ಯುತ್ ಪ್ರಸರಣ ನಿಗಮಕ್ಕೆ ಬರಬೇಕಾದ ಬಾಕಿ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೪ (೬೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಕೈಗಾರಿಕೆ ಮತ್ತು ವಾಣಿಜ್ಯ ಬಳಕೆಗೆ ವಿದ್ಯುತ್ ಸಂಪರ್ಕ ಪಡೆದು ಬಾಕಿ ಉಳಿಸಿಕೊಂಡಿರುವ ಕಂಪನಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಕಂಪನಿವಾರು ಮತ್ತು ವರ್ಷಾವಾರು ವಿವರ ನೀಡುವುದು)

(ಆ) ಈ ಬಾಕಿ ವಸೂಲಾತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ವಿದ್ಯುತ್ ಉತ್ಪಾದನೆ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೫ (೬೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ನೇ ಸಾಲಿನಲ್ಲಿ ರಾಜ್ಯದಲ್ಲಿ ಯಾವ ಯಾವ ಮೂಲಗಳಿಂದ, ಎಲ್ಲೆಲ್ಲಿ ಒಟ್ಟು ಎಷ್ಟು ವಿದ್ಯುತ್ ಉತ್ಪಾದಿಸಲಾಗಿದೆ ; ಪೂರ್ಣ ಮಾಹಿತಿ ನೀಡುವುದು ;



(ಆ) ರಾಜ್ಯದ ವಿದ್ಯುತ್ ಆಗರಗಳಲ್ಲಿರುವ ಒಟ್ಟು ಉತ್ಪಾದನಾ ಶಕ್ತಿ ಸಾಮರ್ಥ್ಯವೆಷ್ಟು ; ಉತ್ಪಾದನೆಯಾಗುತ್ತಿರುವ ವಿದ್ಯುತ್ ಎಷ್ಟು ; ಕಡಿಮೆ ಉತ್ಪಾದನೆಗೆ ಕಾರಣಗಳೇನು ;

(ಇ) ರಾಜ್ಯದಲ್ಲಿ ಸ್ಥಾಪಿತ ಉತ್ಪಾದನಾ ಸಾಮರ್ಥ್ಯಕ್ಕೆ ಅನುಗುಣವಾಗಿ ವಿದ್ಯುತ್ ಉತ್ಪಾದನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಸ್ತೆ ನಿರ್ಮಾಣ ಹಾಗೂ ಸೂಚನಾ ಫಲಕಗಳನ್ನು ಹಾಕಲು ಇರುವ ಮಾನದಂಡಗಳ ಕುರಿತು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೬ (೧೨೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ನಿರ್ಮಾಣಕ್ಕೆ ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಇಕ್ಕೆಲಗಳಲ್ಲಿ ಹಾಕುವ ಸೂಚನಾ ಫಲಕಗಳಿಗೆ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಈ ಮೇಲಿನ ಮಾನದಂಡಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವುದರಿಂದ ವಾಹನ ಚಾಲಕರಿಗೆ, ಪ್ರವಾಸಿಗರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಸೌರ ವಿದ್ಯುತ್ ಉತ್ಪಾದನೆ ಕುರಿತು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೭ (೬೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೌರ ವಿದ್ಯುತ್ ಉತ್ಪಾದನಾ ಪ್ರಮಾಣ ಎಷ್ಟು ;

(ಆ) ಉತ್ಪಾದನಾ ಪ್ರವಮಾಣವನ್ನು ಹೆಚ್ಚಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸಾರ್ವಜನಿಕರು ಸ್ವಂತ ಮನೆಗಳ ಮೇಲೆ ಸೋಲಾರ್ ಪ್ಯಾನೆಲ್ ಗಳನ್ನು ಹಾಕಿ, ಇದರಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ನ್ಯಾಷನಲ್ ಪವರ್ ಗ್ರೀಡ್‌ಗೆ ಸರಬರಾಜು ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಈ ವ್ಯವಸ್ಥೆಯನ್ನು ಕಾರ್ಯರೂಪಕ್ಕೆ ತರಲು ಇರುವ ಮಾನದಂಡಗಳೇನು ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯಲ್ಲಿರುವ ಸಿ.ಎ. ಸೈಟುಗಳ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೪೮ (೬೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯಲ್ಲಿರುವ ಪಟ್ಟಣ ಪಂಚಾಯತ್ (ಪುರಸಭೆ, ನಗರಸಭೆ) ವಾರು ಖಾಲಿ ಇರುವ (ಸಿ.ಎ.) ಸೈಟ್‌ಗಳ ಸಂಖ್ಯೆ ಎಷ್ಟು ; (ಲೇಔಟ್‌ವಾರು ವಿವರ ನೀಡುವುದು)



(ಆ) ಯಾವ ಉದ್ದೇಶಕ್ಕಾಗಿ ಇವುಗಳನ್ನು ಹಂಚಿಕೆ ಮಾಡದೇ ಕಾಯ್ದಿರಿಸಲಾಗಿದೆ ;

(ಇ) ಮುದ್ದೇಬಿಹಾಳ ಪುರಸಭೆಯಲ್ಲಿ ಕಳೆದ ೦೨ ವರ್ಷದಲ್ಲಿ ಯಾವ ಯಾವ ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಎಷ್ಟು ವೆಚ್ಚದಲ್ಲಿ ಕೈಗೊಳ್ಳಲಾಗಿದೆ ; (ವಿವರಣೆ ನೀಡುವುದು)

(ಈ) ಈ ಪುರಸಭೆಯ ವಾರ್ಡ್ ನಂ. ೦೨ ರಲ್ಲಿ ಮೂಲ ಸೌಲಭ್ಯ ಕಲ್ಪಿಸಲು ತೆಗೆದುಕೊಂಡಿರುವ ಕ್ರಮಗಳೇನು?

## ೨೦೧೩–೧೪ನೇ ಸಾಲಿನಲ್ಲಿ ಕಬ್ಬಿಗೆ ನಿಗಧಿಪಡಿಸಿದ ಬೆಲೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯ (೬೮) ಮಾನ್ಯ  ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಸರ್ಕಾರ ಒಂದು ಟನ್ ಕಬ್ಬಿಗೆ ೨೫೦೦ ರೂ.ಗಳನ್ನು ನಿಗಧಿಪಡಿಸಿರುವುದು ನಿಜವೇ;

(ಆ) ಹಾಗಿದ್ದರೆ, ಎಷ್ಟು ಸಕ್ಕರೆ ಕಾರ್ಖಾನೆಗಳು ಸರ್ಕಾರ ನಿಗಧಿಪಡಿಸಿದ ಬೆಲೆ ನೀಡಿ ಕಬ್ಬು ಖರೀದಿಸಿ ರೈತರ ಖಾತೆಗಳಿಗೆ ಹಣ ಜಮಾ ಮಾಡಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರ ನಿಗಧಿಪಡಿಸಿರುವ ಮೊತ್ತವನ್ನು ರೈತರಿಗೆ ನೀಡದೆ ಇರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸದರಿ ಕಾರ್ಖಾನೆಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ?

## ಕಳಪೆ ರಾಸಾಯನಿಕ ಗೊಬ್ಬರಗಳಿಂದ ಕೃಷಿ ಭೂಮಿ ಫಲವತ್ತತೆ ಕಳೆದುಕೊಳ್ಳುತ್ತಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦ (೬೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾರಾಟವಾಗುತ್ತಿರುವ ಕಳಪೆ ಮಟ್ಟದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಕೃಷಿ ಭೂಮಿ ಫಲವತ್ತತೆಯು ಕುಸಿದು ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಭೂಮಿಯ ಫಲವತ್ತತೆಯನ್ನು ಹೆಚ್ಚಿಸಲು ಸಾವಯುವ ಗೊಬ್ಬರ ಬಳಸಲು ರೈತರನ್ನು ಉತ್ತೇಜಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ಅಕ್ರಮ ಕೃಷಿ ಪಂಪ್‌ಸೆಟ್ಟುಗಳ ಸಕ್ರಮ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧ (೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಮೆಸ್ಕಾಂ ವಿಭಾಗದಿಂದ ರೈತರ ಅಕ್ರಮ ಕೃಷಿ ಪಂಪ್‌ಸೆಟ್ಟುಗಳು ಸಕ್ರಮಗೊಂಡ ಪ್ರಕರಣಗಳೆಷ್ಟು ; (ವಿಭಾಗಾವಾರು ಮಾಹಿತಿ ನೀಡುವುದು)



(ಆ) ಮೆಸ್ಕಾಂಗೆ ದಂಡ ಪಾವತಿ ಮಾಡಿದರೂ ಕೆಲವೊಂದು ಕೃಷಿ ಪಂಪ್‌ಸೆಟ್ಟುಗಳನ್ನು ಸಕ್ರಮಗೊಳಿಸದಿರುವ ಬಗ್ಗೆ ಸರ್ಕಾರ ಗಮನಿಸಿದೆಯೇ;

(ಇ) ಹಾಗಿದ್ದರೆ, ಸರ್ಕಾರ ಎಷ್ಟು ದಿನಗಳಲ್ಲಿ ಇಂತಹ ಪಂಪ್‌ಸೆಟ್ಟುಗಳಿಗೆ ಸಂಪರ್ಕ ಕಲ್ಪಿಸಲಾಗುವುದು; ತಡಮಾಡಲು ಕಾರಣಗಳೇನು?

## ನಗರಸಭೆ, ಪುರಸಭೆಗಳಲ್ಲಿ ಘನತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨ (೭೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಮಾಡುವಲ್ಲಿ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ;

(ಆ) ಇದುವರೆವಿಗೂ ಎಷ್ಟು ನಗರಸಭೆ ಮತ್ತು ಪುರಸಭೆಗಳಿಗೆ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ; ಈ ಯೋಜನೆಯಿಂದ ಸರ್ಕಾರಕ್ಕೆ ತಗುಲಿರುವ ಒಟ್ಟು ವೆಚ್ಚ ಎಷ್ಟು;

(ಇ) ಬಾಕಿ ಇರುವಂತಹ ನಗರಸಭೆ ಮತ್ತು ಪುರಸಭೆಗಳಿಗೆ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಮೀಸಲಿಟ್ಟಿರುವ ಕಾಲಮಿತಿ ಎಷ್ಟು?

## ಇತ್ತೀಚಿಗೆ ವಿವಿಧೋದ್ದೇಶಗಳ ಸಹಕಾರಿ ಸಂಘಗಳ ನೋಂದಣಿಯನ್ನು ನಿರ್ಬಂಧಿಸಿರುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩ (೭೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿಗೆ ವಿವಿಧೋದ್ದೇಶಗಳ ಸಹಕಾರಿ ಸಂಘಗಳನ್ನು ನೋಂದಣಿ ಮಾಡಬಾರದೆಂದು ಸಹಕಾರಿ ನಿಬಂಧಕರು ಸುತ್ತೋಲೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಸುತ್ತೋಲೆ ಹೊರಡಿಸಲು ಕಾಯ್ದೆಯಲ್ಲಿ ಅವಕಾಶ ಇದೆಯೇ;

(ಇ) ಯಾವುದಾದರೊಂದು ಸಹಕಾರಿ ಸಂಘವನ್ನು ನೋಂದಣಿ ಮಾಡಬಾರದೆಂದು ನಿರ್ಬಂಧಿಸುವುದು ಒಟ್ಟಾರೆ ಸಹಕಾರ ಚಳುವಳಿಯ ಪ್ರಗತಿಗೆ ಮಾರಕವಲ್ಲವೇ ?

## ರಾಜ್ಯದಲ್ಲಿ ಉಂಟಾಗುತ್ತಿರುವ ವಿದ್ಯುತ್ ವ್ಯತ್ಯಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೫೪ (೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ವಿದ್ಯುತ್ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸಮಸ್ಯೆಯ ಪರಿಹಾರಕ್ಕಾಗಿ ಸರ್ಕಾರ ಯಾವ ಯಾವ ರೀತಿಯ ಮಾರ್ಗೋಪಾಯಗಳನ್ನು ಅನುಸರಿಸುತ್ತಿದೆ ;



(ಆ) ವಿದ್ಯುತ್ ಅಭಾವವನ್ನು ನೀಗಿಸಲು ಯಾವ ಯಾವ ರಾಜ್ಯಗಳಿಂದ ಎಷ್ಟೆಷ್ಟು ಪ್ರಮಾಣದಲ್ಲಿ ಹಾಗೂ ಯಾವ ಯಾವ ದರಗಳಲ್ಲಿ ಖರೀದಿಸಲಾಗುತ್ತಿದೆ ; (ಅವುಗಳಿಗೆ ತಗಲುವ ಒಟ್ಟು ವೆಚ್ಚದ ವಿವರ ಒದಗಿಸುವುದು)

(ಇ) ಹಲವಾರು ಜಿಲ್ಲೆಗಳಲ್ಲಿ ಕೃಷಿ ಮತ್ತು ಕೃಷಿಯೇತರ ಚಟುವಟಿಕೆಗಳು ವಿದ್ಯುತನ್ನು ಅವಲಂಬಿಸಿದ್ದು, ರಾಜ್ಯದಲ್ಲಿ ಕೃಷಿ ಚಟುವಟಿಕೆಗೆ ಬಳಕೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು; ಗೃಹ ಬಳಕೆಗೆ, ಔದ್ಯೋಗಿಕರಣ ಹಾಗೂ ಇತರೇ ಚಟುವಟಿಕೆಗಳಿಗೆ ಬಳಕೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು ;

(ಈ) ಗ್ರಾಮೀಣ ಪ್ರದೇಶಗಳಲ್ಲಿ ಒಂದು ದಿನದ ಬಳಕೆಗೆ ಬೇಕಾಗುವ ವಿದ್ಯುತ್ ಪ್ರಮಾಣ ಎಷ್ಟು; ಎಷ್ಟು ಪ್ರಮಾಣದಲ್ಲಿ ಪೂರೈಸಲಾಗುತ್ತಿದೆ;

(ಉ) ಕಳೆದ ವರ್ಷಗಳಲ್ಲಿ ಎಷ್ಟು ಸಬ್–ಸ್ಟೇಷನ್‌ಗಳನ್ನು ನಿರ್ಮಿಸಲಾಗಿದೆ; ಎಷ್ಟು ಟ್ರಾನ್ಸ್‌ಫಾರ್ಮರ್ (ವಿದ್ಯುತ್ ಪರಿವರ್ತಕ) ಗಳನ್ನು ಖರೀದಿಸಲಾಗಿದೆ;

(ಊ) ರಾಜ್ಯದಲ್ಲಿರುವ ವಿದ್ಯುತ್ ಪರಿವರ್ತಕಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಹಾಗೂ ವೆಚ್ಚದ ವಿವರ ನೀಡುವುದು)

## ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತಲುಪಲು ಇರುವ ಸಂಪರ್ಕ ಮಾರ್ಗಗಳ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫ (೭೭) ವಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವನಹಳ್ಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತಲುಪಲು ಇರುವ ರಸ್ತೆ ಮಾರ್ಗಗಳು ಯಾವುವು; ಯಾವ ಭಾಗದಿಂದ ಈ ಉದ್ದೇಶಕ್ಕಾಗಿ ನಿರ್ಮಾಣ ಮಾಡಲಾಗಿದೆ; ನಿರ್ಮಾಣಕ್ಕಾಗಿ ತಗಲಿರುವ ವೆಚ್ಚ ಎಷ್ಟು ; (ನಿರ್ಮಾಣವಾದ ವರ್ಷ ಹಾಗೂ ಸಂಸ್ಥೆಯ ಮಾಹಿತಿ ಒದಗಿಸುವುದು)

(ಆ) ಈ ರಸ್ತೆಯಲ್ಲಿನ ವಾಹನದಟ್ಟಣೆ ಮತ್ತು ತಲುಪುವ ಸಮಯ ದೃಷ್ಟಿಯಲ್ಲಿಟ್ಟುಕೊಂಡು ಪರ್ಯಾಯ ಸಂಪರ್ಕ ಮಾರ್ಗಗಳನ್ನು ನಿರ್ಮಿಸಲಾಗಿದೆಯೇ; ಹಾಗಿದ್ದಲ್ಲಿ ಈ ಕುರಿತಾದ ಸಂಪೂರ್ಣ ಮಾಹಿತಿ ಒದಗಿಸುವುದು;

(ಇ) ನಿರ್ಮಿಸಲಾದ ಸಂಪರ್ಕ ಮಾರ್ಗಗಳನ್ನು ಬಳಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಇದಕ್ಕೆ ಕಾರಣವಾದ ಅಂಶಗಳು ಯಾವುವು ;(ಪ್ರತ್ಯೇಕ ಮಾಹಿತಿ ಒದಗಿಸುವುದು)

(ಈ) ನಿರ್ಮಿಸಲಾದ ಸಂಪರ್ಕ ಮಾರ್ಗಗಳನ್ನು ಬಳಸದಿರುವುದರಿಂದ ಇದಕ್ಕಾಗಿ ವ್ಯಯಿಸಿದ ಹಣ ಪೋಲಾಗಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ? (ಪೂರ್ಣ ವಿವರ ಒದಗಿಸುವುದು)



## ಸಂಪೂರ್ಣ ಸೋಲಾರ್ ಗ್ರಾಮಗಳನ್ನು ಸ್ಥಾಪಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬ (೮೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನ ಕೊರತೆ ನಿವಾರಿಸಲು ಸೋಲಾರ್ ವಿದ್ಯುತ್ ಬಳಕೆ ಹೆಚ್ಚಿಸುವ ಅವಶ್ಯಕತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸೋಲಾರ್ ವಿದ್ಯುತ್ ಬಳಕೆಯನ್ನು ಹೆಚ್ಚಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ "ಸಂಪೂರ್ಣ ಸೋಲಾರ್ ಗ್ರಾಮ"ಗಳನ್ನು ಸ್ಥಾಪಿಸಲಾಗುವುದೇ, ಹಾಗಿದ್ದಲ್ಲಿ, ಯಾವಾಗ? (ವಿವರಗಳನ್ನು ನೀಡುವುದು)

## ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭ (೮೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಉತ್ಪನ್ನಗಳ ಶೇಖರಣೆ ಮತ್ತು ಸಂಸ್ಕರಣೆ ಮಾಡುವ ಅವಶ್ಯಕತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ತೋಟಗಾರಿಕೆ ಸಮಗ್ರ ಅಭಿವೃದ್ಧಿಗಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ;

(ಈ) ಸದರಿ ಜಿಲ್ಲೆಗಳಲ್ಲಿ ಎಷ್ಟು ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ ; ಯಾವಾಗ ಸ್ಥಾಪಿಸಲಾಗುವುದು?

## ಯಶಸ್ವಿನಿ ಆರೋಗ್ಯ ವಿಮೆ ಯೋಜನೆ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮ (೭೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳು, ಹಿಂದುಳಿದ ಮತ್ತು ಅಲ್ಪಸಂಖ್ಯಾತರಿಗೆ ಸಹಕಾರ ಸೌಲಭ್ಯಗಳ ಪ್ರಯೋಜನೆ ಲಭಿಸುವಂತಾಗಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ;

(ಆ) ಸದರಿ ವರ್ಗಗಳ ಸದಸ್ಯರುಗಳಿಗೆ ಯಶಸ್ವಿನಿ ಯೋಜನೆಯ ಲಾಭ ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಯಶಸ್ವಿನಿ ಆರೋಗ್ಯ ವಿಮೆ ಯೋಜನೆಯಡಿಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ನಗರ ಮತ್ತು ಗ್ರಾಮೀಣವಾರು, ಫಲಾನುಭವಿಗಳ ವಿವರಗಳನ್ನು ನೀಡುವುದು)



## ರಾಜ್ಯದಲ್ಲಿರುವ ದೊಡ್ಡ ಗ್ರಾಮ ಪಂಚಾಯತ್‌ಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯ (೮೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ದೊಡ್ಡ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ ಮೇಲ್ದರ್ಜೆಗೇರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ತಾಲ್ಲೂಕಿನ ಯಾವ ಯಾವ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲು ತೀರ್ಮಾನಿಸಲಾಗಿದೆ ;

(ಇ) ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಮೇಲ್ದರ್ಜೆಗೇರಿಸಲಾಗುವುದು ಇದರಿಂದ ಸರ್ಕಾರಕ್ಕೆ ಎಷ್ಟು ಹೊರೆಯಾಗಲಿದೆ ?

## ನಗರಸಭೆ/ಪುರಸಭೆಗಳ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತದ ಅಭಿಯಾನದಡಿ ಸ್ವಚ್ಛತೆ ಮಾಡುವಲ್ಲಿ ವ್ಯತ್ಯಯವಾಗುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦ (೮೩+೮೪+೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಸಭೆಗಳಲ್ಲಿ ಒಟ್ಟು ಮಂಜೂರಾದ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಅದರಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ಸಲ್ಲಿಸುವುದು)

(ಇ) ರಾಜ್ಯದ ಪುರಸಭೆಗಳಲ್ಲಿ ಪೌರ ಕಾರ್ಮಿಕರ ಹುದ್ದೆಗಳು ಖಾಲಿ ಇರುವುದರಿಂದ ಸ್ವಚ್ಛ ಭಾರತ ಅಭಿಯಾನದಡಿ ಸ್ವಚ್ಛತೆ ಮಾಡುವಲ್ಲಿ ವ್ಯತ್ಯಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಖಾಲಿ ಇರುವ ಪೌರ ಕಾರ್ಮಿಕರ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; ಸರ್ಕಾರವು ಇದನ್ನು ಬಗೆಹರಿಸಲು ಕೈಗೊಂಡ ಕ್ರಮಗಳೇನು ?



## ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೧ (೯೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಬಾರಿ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳವನ್ನು ಖರೀದಿಸಿರುವುದು ನಿಜವೇ; ಖರೀದಿಸಿದ್ದಲ್ಲಿ ಅದರ ಒಟ್ಟು ಮೊತ್ತವೆಷ್ಟು; ಪ್ರತಿ ಕ್ವಿಂಟಾಲ್ ಮೆಕ್ಕೆಜೋಳದ ಖರೀದಿ ಬೆಲೆಯಷ್ಟು;

(ಆ) ಈ ಬಾರಿ ಅದನ್ನು ಮಾರಿರುವುದು ನಿಜವೇ, ಹಾಗಿದ್ದಲ್ಲಿ ಅದರ ಪ್ರಮಾಣ ಮತ್ತು ಪ್ರತಿ ಕ್ವಿಂಟಾಲ್ ಮೆಕ್ಕೆಜೋಳದ ಬೆಲೆ ಎಷ್ಟು;

(ಇ) ಖರೀದಿಸಿದ ಬೆಲೆಗಿಂತ ಕಡಿಮೆ ದರಕ್ಕೆ ಮಾರಿರುವುದು ನಿಜವೇ, ಇದಕ್ಕೆ ಕಾರಣಗಳೇನು, ಇದರಿಂದ ಉಂಟಾಗಿರುವ ನಷ್ಟವೆಷ್ಟು;

(ಈ) ಈ ಸಂಬಂಧ ತಪ್ಪಿತಸ್ಥರನ್ನು ಗುರುತಿಸಲಾಗಿದೆಯೇ; ಮುಂದೆ ಈ ರೀತಿ ಮರುಕಳಿಸದಿರಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ತೊಗರಿ ಬೇಸಾಯದ ವಿಸ್ತೀರ್ಣದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೬೨ (೯೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಬೆಳೆದ ಅಂದಾಜು ತೊಗರಿ ಬೆಳೆ ಬೇಸಾಯದ ವಿಸ್ತೀರ್ಣವೆಷ್ಟು; ಹಾಗೂ ಉತ್ಪಾದನೆ ಎಷ್ಟು;

(ಆ) ಈ ವರ್ಷದ ಅಂದಾಜು ತೊಗರಿ ಬೇಸಾಯದ ವಿಸ್ತೀರ್ಣವೆಷ್ಟು; ಉತ್ಪಾದನೆಯ ಅಂದಾಜು ನಿರೀಕ್ಷೆ ಏನು ;

(ಇ) ಕೇಂದ್ರ ಸರ್ಕಾರ ಈ ವರ್ಷ ತೊಗರಿಗೆ ಬೆಂಬಲ ಬೆಲೆ ಘೋಷಿಸಿದೆಯೆ ; (ವಿವರ ನೀಡುವುದು)

(ಈ) ಈ ಕುರಿತು ಕೃಷಿ ಬೆಲೆ ಆಯೋಗದಿಂದಾಗಲಿ ಅಥವಾ ಕೃಷಿ ಇಲಾಖೆಯಿಂದಾಗಲಿ ಯಾವುದಾದರು ಶಿಫಾರಸ್ಸು ಬಂದಿದೆಯೇ; ಬಂದಿದ್ದಲ್ಲಿ ವಿವರ ನೀಡುವುದು ;

(ಉ) ಬೆಂಬಲ ಬೆಲೆ ನೀಡುವ ಸಂಬಂಧ ಸರ್ಕಾರ ಯಾವ ನಿರ್ಧಾರಕ್ಕೆ ಬಂದಿದೆ ?

## ಚಾರ್ಮಾಡಿ ಘಾಟ್ ರಸ್ತೆ ದುರಸ್ಥಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೬೩ (೮೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾರ್ಮಾಡಿ ಘಾಟ್ ರಸ್ತೆ ದುರಸ್ಥಿ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆಯೇ; ಈ ದುರಸ್ಥಿ ಕಾರ್ಯವನ್ನು ನೀಡಿರುವ ಕುರಿತು ವಿವರ ನೀಡುವುದು ;

(ಆ) ಈ ದುರಸ್ಥಿ ಕಾರ್ಯಕ್ಕೆ ನಿಗಧಿಪಡಿಸಿರುವ ಕಾಲಮಿತಿ ಏನು; ನಿಗಧಿತ ಗಡುವಿನೊಳಗೆ ಈ ಕಾರ್ಯ ಪೂರ್ಣಗೊಳ್ಳುವುದೇ ಇಲ್ಲವಾದಲ್ಲಿ ತೆಗೆದುಕೊಳ್ಳಲಾಗುವ ಕ್ರಮಗಳೇನು ;

(ಇ) ಈ ರಸ್ತೆಯ ತಿರುವುಗಳಲ್ಲಿ ಹಲವು ಕಡೆ ಸೂಚನಾ ಫಲಕಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ



ಇದನ್ನು ಅಳವಡಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ತರಕಾರಿಗಳಿಗೆ ಕ್ರಿಮಿನಾಶಕ ಸಿಂಪಡಿಸುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೬೪ (೯೦) ಮಾನ್ಯ, ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತರಕಾರಿಗಳಿಗೆ ಸಿಂಪಡಿಸುವ ಕ್ರಿಮಿನಾಶಕಗಳಲ್ಲಿ ಆರ್ಗನೋ ಕ್ಲೋರಿನ್ ಪೆಸ್ಟಿಸೈಡ್ (ಒಸಿಪಿ) ಅಂಶವಿರುವುದರಿಂದ ತರಕಾರಿಗಳ ಮೇಲೆ ಆಗುವ ದುಷ್ಪರಿಣಾಮಗಳೇನು ;

(ಆ) ಇದನ್ನು ಯಾವ ತರಕಾರಿಗಳಿಗೆ ಯಾವ ಕಾರಣಕ್ಕೆ ಸಿಂಪಡಿಸಲಾಗುತ್ತದೆ ;

(ಇ) ಮಾರುಕಟ್ಟೆಗಳಲ್ಲಿ ಸಿಗುವ ಯಾವ ಯಾವ ತರಕಾರಿಗಳಲ್ಲಿ ಸಾಮಾನ್ಯವಾಗಿ ಈ ಅಂಶ ಕಂಡುಬಂದಿದೆ ;

(ಈ) ಈ ಕ್ರಿಮಿನಾಶಕ ಬಳಕೆಯನ್ನು ತಡೆಗಟ್ಟಲು ಸರ್ಕಾರ ಚಿಂತಿಸುವುದೇ ?

## ಆಗುಂಬೆ ಘಾಟ್ ರಸ್ತೆ ದುರಸ್ಥಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೬೫ (೮೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಗುಂಬೆ ಘಾಟ್ ರಸ್ತೆ ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ರಸ್ತೆ ಕಾಮಗಾರಿಗೆ ಈಗಾಗಲೇ ಅನುಮತಿ ನೀಡಲಾಗಿದೆಯೇ ;

(ಆ) ಇದಕ್ಕೆ ತಗಲುವ ವೆಚ್ಚ ಕಾಮಗಾರಿ ಪೂರ್ಣಗೊಳಿಸಲು ನೀಡಿರುವ ಕಾಲಾವಧಿ ಏನು ;

(ಇ) ಈ ರಸ್ತೆ ಅಭಿವೃದ್ಧಿ ಕಾರ್ಯ ವಿಳಂಬವಾಗುತ್ತಿರುವುದು ನಿಜವೇ; ಇದಕ್ಕೆ ಕಾರಣಗಳೇನು ;

(ಈ) ಈ ರಸ್ತೆ ಅಭಿವೃದ್ಧಿ ಕಾರ್ಯವನ್ನು ಚುರುಕುಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಕ್ಫ್ ಇಲಾಖೆಯಿಂದ ಮಸೀದಿಗಳಿಗೆ ಹಣ ಬಿಡುಗಡೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೬ (೯೪) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಗೆ ವಕ್ಫ್ ಬೋರ್ಡಿನಿಂದ ಮಂಜೂರಾಗಿರುವ ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಸರ್ಕಾರ ಆದೇಶ ಮಾಡಿದರೂ ಕೂಡ ಈವರೆವಿಗೂ ಮಸೀದಿಗಳ ಜೀರ್ಣೋದ್ಧಾರ ಸಲುವಾಗಿ ಹಣ ಬಿಡುಗಡೆಯಾಗದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಶೀಘ್ರವಾಗಿ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಈಗಾಗಲೇ ಎಷ್ಟು ಮಸೀದಿಯವರಿಗೆ ಹಣ ವಿತರಿಸಲಾಗಿದೆ ;



(ಈ) ಬೆಂಗಳೂರು ವಕ್ಫ್ ಬೋರ್ಡ್‌ನವರು ವಿನಾಕಾರಣ ತಪ್ಪುಗಳನ್ನು ತೋರಿಸಿ ತೊಂದರೆ ಕೊಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಕೈಗೊಂಡಿರುವ ಕ್ರಮವೇನು ?

## ಬೆಳಗಾವಿ ಜಿಲ್ಲೆಯಲ್ಲಿ ರೈತರ ಹತ್ತಿ ಬೆಳೆ ನಾಶವಾಗಿ ಸರ್ಕಾರದಿಂದ ಪರಿಹಾರ ನೀಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೭ (೯೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ವರ್ಷ ಬೆಳಗಾವಿ ಜಿಲ್ಲೆಯಲ್ಲಿ ಉತ್ತಮ ಗುಣಮಟ್ಟದ ಹತ್ತಿ ಬೀಜ ಪೂರೈಸದೇ ಇರುವುದರಿಂದ ಹಾಗೂ ಹವಾಮಾನ ವೈಪರೀತ್ಯದಿಂದಾಗಿ ಹತ್ತಿಯ ಬೆಳೆ ಚೆನ್ನಾಗಿ ಬಾರದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ–ಯಾವ ತಾಲ್ಲೂಕುಗಳಲ್ಲಿ ಎಷ್ಟು ಪ್ರಮಾಣದಲ್ಲಿ ಬೆಳೆ ನಾಶವಾಗಿದೆ; ಅದರ ಅಂದಾಜು ಮೊತ್ತವೆಷ್ಟು ;

(ಇ) ಬಂದಿದ್ದಲ್ಲಿ; ಸರ್ಕಾರದಿಂದ ಬೆಳೆ ಪರಿಹಾರ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಸಕ್ಕರೆ ಕಾರ್ಖಾನೆಗಳು ರೈತರಿಗೆ ನೀಡಿರುವ ಹಣದ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೮ (೯೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ಕಳೆದ ವರ್ಷ ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್‌ಗೆ ಎಷ್ಟು ಹಣ ಕೊಡಬೇಕು ಎಂದು ನಿಗಧಿಪಡಿಸಲಾಗಿತ್ತು ;

(ಆ) ಸರ್ಕಾರ ನಿಗಧಿಪಡಿಸಿದ ಪ್ರಕಾರ ಹಣ ಪಾವತಿಸಿರುವ ಸಕ್ಕರೆ ಕಾರ್ಖಾನೆಗಳು ಯಾವುವು; (ಕಾರ್ಖಾನೆಗಳ ಹೆಸರು ವಿಳಾಸ ನೀಡುವುದು) ;

(ಇ) ಯಾವ ಯಾವ ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್ನಿಗೆ ಎಷ್ಟು–ಎಷ್ಟು ಹಣ ಕೊಟ್ಟಿರುತ್ತದೆ; (ಕಾರ್ಖಾನೆಗಳ ಹೆಸರು ವಿಳಾಸ ನೀಡುವುದು) ;

(ಈ) ಸರ್ಕಾರಿ ಆದೇಶ ಪಾಲನೆ ಮಾಡದೇ ಇರುವ ಕಾರ್ಖಾನೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ?

## ಬೈಲಹೊಂಗಲ ಪುರಸಭೆಗೆ ಹೆಚ್ಚಿನ ಆರ್ಥಿಕ ನೆರವು ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೯ (೯೩) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಪುರಸಭೆಯು ನಗರಸಭೆಯಾಗಿ ಪರಿವರ್ತನೆ ಹೊಂದುವ ಎಲ್ಲ ಅರ್ಹತೆಗಳನ್ನು ಹೊಂದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಇದನ್ನು ನಗರಸಭೆಯನ್ನಾಗಿ ಪರಿವರ್ತನೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಆ) ಪುರಸಭೆಯು ಆರ್ಥಿಕ ಮುಗ್ಗಟ್ಟಿನಿಂದ ತೊಂದರೆಗೊಳಗಾಗಿದ್ದು ಹೆಚ್ಚಿನ ಅಭಿವೃದ್ಧಿ ಕೆಲಸಗಳು ಆಗದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ವಿಸ್ತರಣೆ ಪ್ರದೇಶದಲ್ಲಿ ಗಟಾರು, ರಸ್ತೆ, ವಿದ್ಯುಚ್ಛಕ್ತಿ, ನೀರು ಮುಂತಾದ ಮೂಲಭೂತ ಸೌಕರ್ಯ ಇಲ್ಲದೆ ಇರುವುದರಿಂದ ಈ ಕೆಲಸಗಳನ್ನು ಕೈಗೊಳ್ಳಲು ಹತ್ತು ಕೋಟಿ ರೂ.ಗಳನ್ನು ವಿಶೇಷ ಅನುದಾನವಾಗಿ ಬಿಡುಗಡೆ ಮಾಡಲಾಗುವುದೇ ?

## ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕಿನಲ್ಲಿ ರೈತರ ಕಾಳು ಸಂಗ್ರಹಿಸಲು ಗ್ರಾಮೀಣ ಅಭಿವೃದ್ಧಿ ಯೋಜನೆಯಡಿ ಗೋಡಾವುನ್ ಕಟ್ಟುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೭೦ (೯೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕಿನಲ್ಲಿ ರೈತರ ಕಾಳು ಸಂಗ್ರಹಿಸಲು ಗೋಡಾವುನ್ ಕಟ್ಟಲು ಎ.ಪಿ.ಎಂ.ಸಿ. ಸವದತ್ತಿ ಹಾಗೂ ಬೈಲಹೊಂಗಲ ಇವರಿಂದ ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿವೆಯೇ ;

(ಆ) ಈ ತಾಲ್ಲೂಕುಗಳಲ್ಲಿ ಮಲಪ್ರಭಾ ಯೋಜನೆಯ ಮುಳುಗಡೆ ಪ್ರದೇಶದ ಜನರು ವಾಸಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಪುನರ್ ವಸತಿ ಕೇಂದ್ರಗಳಲ್ಲಿ ಹಾಗೂ ಉಳಿದ ಹಳ್ಳಿಗಳಲ್ಲಿ ರೈತರಿಗೆ ತಮ್ಮ ಕಾಳು ಸಂಗ್ರಹಿಸಲು ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಆದ್ಯತೆಯ ಮೇರೆಗೆ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ ಇಲ್ಲಿ ಸ್ವಲ್ಪ ಹೆಚ್ಚು ಹಣ ಬಿಡುಗಡೆ ಮಾಡಿ ಗೋಡಾವುನ್ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಯಾವ–ಯಾವ ಗ್ರಾಮಗಳಲ್ಲಿ ಗೋಡಾವುನ್ ಕಟ್ಟಲು ಪ್ರಸ್ತಾವನೆಗಳು ಎ.ಪಿ.ಎಂ.ಸಿ.ಯಿಂದ ಬಂದಿರುತ್ತವೆ ;

(ಊ) ಬೈಲಹೊಂಗಲ ತಾಲ್ಲೂಕಿನ ನೇಸರಗಿ ಹಾಗೂ ಸಂಪಗಾಂವ ಗ್ರಾಮಗಳಲ್ಲಿ ಮುಳುಗಡೆ ಪ್ರದೇಶದ ಜನರು ವಲಸೆಯಾಗಿದ್ದು ಅಲ್ಲಿ ಗೋಡಾವುನ್ ಕಟ್ಟಲು ಎಲ್ಲ ಮೂಲಭೂತ ಸೌಕರ್ಯ ಹೊಂದಿದ್ದು ಆದ್ಯತೆಯ ಮೇರೆಗೆ ಗೋಡಾವುನ್ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ?

## ಬೆಳಗಾಂ ಜಿಲ್ಲೆಯಲ್ಲಿ ವಕ್ಫ್ ಆಸ್ತಿಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧ (೧೦೨) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯಲ್ಲಿ ವಕ್ಫ್ ಇಲಾಖೆಗೆ ಸಂಬಂಧಪಟ್ಟಂತೆ ಇರುವ ಆಸ್ತಿಗಳ ಸಂಖ್ಯೆ ಎಷ್ಟು;

(ಆ) ಜಿಲ್ಲೆಯ ಯಾವ ಯಾವ ಸ್ಥಳದಲ್ಲಿವೆ; (ಇದರ ವಿಸ್ತೀರ್ಣ, ಮೌಲ್ಯಗಳನ್ನು ಚಕ್ಕುಬಂದಿಗಳ ಸಮೇತ ವಿವರ ನೀಡುವುದು) ;

(ಇ) ದರ್ಗಾ/ಸ್ಮಶಾನ ಮತ್ತು ಮಸೀದಿಗಳ ಅಭಿವೃದ್ಧಿಗೆ ೨೦೧೪–೧೫ನೇ ಸಾಲಿನಲ್ಲಿ ಎಷ್ಟು ಹಣ ಒದಗಿಸಲಾಗಿದೆ ಮತ್ತು ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳು ಯಾವುವು (ಸಂಪೂರ್ಣ ಮಾಹಿತಿ ನೀಡುವುದು) ?



## ಕೃಷಿ ಅವಲಂಬಿತ ಕುಟುಂಬಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨ (೯೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಕೃಷಿ ಅವಲಂಬಿತ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ;

(ಆ) ರೈತರಿಗೆ ಆಧುನಿಕ ಕೃಷಿ ಬಗ್ಗೆ ಮಾಹಿತಿ ನೀಡಲು ಹೊರ ರಾಜ್ಯಗಳಿಗೆ ಅಧ್ಯಯನ ಪ್ರವಾಸ ಕಾರ್ಯಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಇದಕ್ಕೆ ತಗಲುವ ವೆಚ್ಚವೆಷ್ಟು ?

## ಇಲಾಖೆ ಅಡಿ ಹಮ್ಮಿಕೊಂಡಿರುವ ಕಾಮಗಾರಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩ (೧೦೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿಗೆ ಬೆಳಗಾವಿ ಜಿಲ್ಲೆಯಲ್ಲಿ ಕೃಷಿ ಇಲಾಖಾ ವತಿಯಿಂದ ಹಮ್ಮಿಕೊಂಡಿರುವ ಅಭಿವೃದ್ಧಿ ಯೋಜನೆಗಳಾವುವು; ಇದರ ಒಟ್ಟು ಮೊತ್ತ ಎಷ್ಟು; (ಯೋಜನಾವಾರು, ಕಾಮಗಾರಿವಾರು ವಿವರ ನೀಡುವುದು)

(ಆ) ಅಭಿವೃದ್ಧಿ ಕಾಮಗಾರಿಗಳು ಯಾವ ಹಂತದಲ್ಲಿದೆ; ಮುಕ್ತಾಯವಾಗುವುದು ಯಾವಾಗ;

(ಇ) ಗುಣಮಟ್ಟದ ಕಾಮಗಾರಿಗೆ ಯಾವ ಮಾದರಿಯ ಕ್ರಮ ಕೈಗೊಳ್ಳಲಾಗಿದೆ; ಗುತ್ತಿಗೆ ನೀಡುವ ಕಾರ್ಯದಲ್ಲಿ ಯಾವ ಮಾನದಂಡ ಅನುಸರಿಸಲಾಗಿದೆ;

(ಈ) ನಿಗಧಿತ ಅವಧಿಯಲ್ಲಿ ಗುತ್ತಿಗೆದಾರರು ಕಾಮಗಾರಿಯನ್ನು ಪೂರೈಸದಿದ್ದರೆ ಅಥವಾ ಕಳಪೆ ಕಾಮಗಾರಿ ಆಗಿದ್ದರೆ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮ ಏನು ?

## ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಅನುಷ್ಠಾನ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪(೧೦೧) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಕಲ್ಯಾಣ ಯೋಜನೆಗಳು ಯಾವುವು ; ಆ ಪೈಕಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಸೌಲಭ್ಯಗಳಡಿಯಲ್ಲಿ ಒದಗಿಸಲಾದ ವಿದ್ಯಾರ್ಥಿ ವಸತಿ ನಿಲಯಗಳಿಗೆ ಶೈಕ್ಷಣಿಕ, ಆರ್ಥಿಕ ನೆರವು ಹಾಗೂ ಇತರೆ ಸೌಲಭ್ಯಗಳನ್ನು ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ;



(ಇ) ಅಲ್ಪ ಸಂಖ್ಯಾತ ಮಹಿಳೆಯರ ಮತ್ತು ಯುವಕರಿಗೆ ಸ್ವ ಉದ್ಯೋಗ ಒದಗಿಸಿಕೊಳ್ಳಲು ಸರ್ಕಾರದ ಆರ್ಥಿಕ ನೆರವು ಮತ್ತು ಮತ್ತಿತರ ಅಭಿವೃದ್ಧಿ ಕ್ರಮಗಳಾವುವು ; ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ವಿನಿಯೋಗಿಸಿದ ಅನುದಾನದ ವಿವರಗಳೇನು ?

## ಅಪೆಕ್ಸ್ ಬ್ಯಾಂಕಿನಿಂದ ಡಿ.ಸಿ.ಸಿ ಬ್ಯಾಂಕುಗಳಿಗೆ ನೀಡುವ ಸಾಲ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫ (೯೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅಪೆಕ್ಸ್ ಬ್ಯಾಂಕ್‌ನ ವ್ಯಾಪ್ತಿಯಲ್ಲಿ ಎಷ್ಟು ಡಿ.ಸಿ.ಸಿ ಬ್ಯಾಂಕುಗಳು ಕಾರ್ಯ ನಿರ್ವಹಿಸುತ್ತಿವೆ ; ಇದರ ವ್ಯಾಪ್ತಿಯಲ್ಲಿ ಬೆಳಗಾಂ ಡಿ.ಸಿ.ಸಿ. ಬ್ಯಾಂಕಿಗೆ ಎಷ್ಟು ಸಾಲ ನೀಡಲಾಗಿದೆ ; ಈ ಸಾಲಕ್ಕೆ ಎಷ್ಟು ಬಡ್ಡಿ ನಿಗಧಿಪಡಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಅಪೆಕ್ಸ್ ಬ್ಯಾಂಕಿನಿಂದ ಪಡೆದ ಎಷ್ಟು ಪ್ರತಿಶತ ಸಾಲವನ್ನು ಕೃಷಿ ಹಾಗೂ ಕೃಷಿಯೇತರ ರೈತರಿಗೆ ಸಾಲ ನೀಡಿದ್ದಾರೆ ; (ವಿವರ ನೀಡುವುದು)

(ಇ) ಅಪೆಕ್ಸ್ ಬ್ಯಾಂಕ್‌ನ ಎನ್.ಪಿ.ಎ., ಎಷ್ಟಿದೆ ನಬಾರ್ಡ್‌ನಿಂದ ಎಷ್ಟು ಸಾಲ ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)

## ಗೃಹ ನಿರ್ಮಾಣ ಸಹಕಾರಿ ಸಂಘಗಳ ಅವ್ಯವಹಾರ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೭೬ (೧೦೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಗೃಹ ನಿರ್ಮಾಣ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ; (ಸಂಘಗಳ ಹೆಸರು, ವಹಿವಾಟಿನ ವಿವರ ನೀಡುವುದು)

(ಆ) ಅವ್ಯವಹಾರ ನಡೆಸಿರುವ ಗೃಹ ನಿರ್ಮಾಣ ಸಹಕಾರಿ ಸಂಘಗಳೆಷ್ಟು; ಹಾಗೂ ಯಾವ ಯಾವ ಸಂಘಗಳು ಯಾವ ಯಾವ ಅಕ್ರಮಗಳನ್ನು ಎಸಗಿವೆ ; (ಈ ರೀತಿ ಅಕ್ರಮವೆಸಗಿರುವ ಸಂಘಗಳ ಹೆಸರು, ಭಾಗಿಯಾಗಿರುವವರ ಹೆಸರು ಪ್ರಕರಣವಾರು ವಿವರ ನೀಡುವುದು)

(ಇ) ಈ ಅಕ್ರಮ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಅಕ್ರಮವೆಸಗಿರುವವರ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ಪ್ರಕರಣವಾರು ವಿವರ ನೀಡುವುದು)

## ಹನಿ ನೀರಾವರಿ ಪದ್ಧತಿ ಅಳವಡಿಸಿಕೊಂಡವರಿಗೆ ಸಹಾಯಧನ ಮಂಜೂರು ಮಾಡದೇ ಇರುವ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೭೭ (೧೧೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ



ಪದ್ಧತಿಯನ್ನು ಅಳವಡಿಸಿಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯ ಧನ ಪಡೆದುಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಸಹಾಯ ಧನ ನೀಡಬೇಕಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಕೇಂದ್ರ ಸರ್ಕಾರದಿಂದ ಬರಬೇಕಾಗಿರುವ ಸಹಾಯಧನ ಬಂದಿದ್ದರೂ ಸಹ ಇಲ್ಲಿಯವರೆಗೂ ಫಲಾನುಭವಿಗಳಿಗೆ ಸಹಾಯಧನ ನೀಡದೇ ಇರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಮಳೆಯಾಧಾರಿತ ಕೃಷಿ ಪದ್ಧತಿ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೮ (೧೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಳೆಯಾಧಾರಿತ ಕೃಷಿ ಅವಲಂಭಿತ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಇದು ರಾಜ್ಯದ ಒಟ್ಟು ರೈತರ ಪ್ರಮಾಣದ ಶೇಕಡ ಪ್ರಮಾಣ ಎಷ್ಟು ;

(ಇ) ಈ ರೈತರ ಪ್ರಯೋಜನಕ್ಕೆ ಕೃಷಿ ಇಲಾಖೆ ತಂದಿರುವ ಒಣ ಬೇಸಾಯ ಪದ್ಧತಿಗಳ ವಿವರ ನೀಡುವುದು ;

(ಈ) ಒಣ ಬೇಸಾಯ ಮಾಡುವ ರೈತರ ಹಿತ ಕಾಪಾಡುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಧಾರವಾಡ ಜಿಲ್ಲೆಯ ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಿರುವ ಬಗ್ಗೆ.

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) :–**

೭೯ (೧೧೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ವಕ್ಫ್ ಸಂಸ್ಥೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಆ) ಸರ್ಕಾರ ನೀಡಿರುವ ಅನುದಾನವನ್ನು ಎಷ್ಟು ಸಂಸ್ಥೆಗಳಿಗೆ ನೀಡಲಾಗಿದೆ ; (ವರ್ಷವಾರು, ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ಅನುದಾನ ಪಡೆಯದ ಸಂಸ್ಥೆಗಳು ಯಾವುವು ; ಇದಕ್ಕೆ ಕಾರಣವೇನು ? (ವರ್ಷವಾರು, ಮಾಹಿತಿ ನೀಡುವುದು)

## ಹೊನ್ನಾಳಿ ಮತ್ತು ಹರಿಹರ ರಸ್ತೆ ಕಾಮಗಾರಿ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) :–**

೮೦ (೧೧೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕ ಮತ್ತು ಮೈಸೂರಿಗೆ ಸಂಪರ್ಕ ಕಲ್ಪಿಸುವ ಹೊನ್ನಾಳಿ ನ್ಯಾಮತಿ ರಸ್ತೆ ತುಂಗಭದ್ರ ನದಿಗೆ ಹೊಸದಾಗಿ



ಕಟ್ಟುತ್ತಿರುವ ಸೇತುವೆ ಕಾಮಗಾರಿ ಸ್ಥಗಿತಗೊಂಡಿದ್ದು ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕಾಮಗಾರಿಯ ವಿಳಂಬಕ್ಕೆ ಕಾರಣ ಏನು ;

(ಇ) ಈ ಕಾಮಗಾರಿಯನ್ನು ಯಾವ ಸಮಯದಲ್ಲಿ ಪೂರ್ಣಗೊಳಿಸಲಾಗುವುದು ;

(ಈ) ಸದರಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಫೇಶ್ಇಮಾಮ್ ಮತ್ತು ಮೌಜಂನ್ ಇವರುಗಳಿಗೆ ಸಹಾಯಧನ ನೀಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) :–**

೮೧ (೧೧೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಫೇಶ್ಇಮಾಮ್ ಮತ್ತು ಮೌಜಂನ್ ಇವರುಗಳಿಗೆ ಸಹಾಯಧನ ನೀಡುತ್ತಿರುವ ಜಿಲ್ಲೆಗಳು ಯಾವುವು ; ಯಾವ ಜಿಲ್ಲೆಯಲ್ಲಿ ಬಾಕಿ ಇದೆ ; (ಮಾಹಿತಿ ನೀಡುವುದು)

(ಆ) ಬಾಕಿ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನ್ಯಾಷನಲ್ ಟೆಕ್ನಾಲಾಜಿಕಲ್ ಇನ್ಸ್‌ಸ್ಟಿಟ್ಯೂಟ್ (NTI)ನ ಗೃಹ ನಿರ್ಮಾಣ ಸಹಕಾರ ಸಂಘದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨ (೧೧೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಷನಲ್ ಟೆಕ್ನಾಲಾಜಿಕಲ್ ಇನ್ಸ್‌ಸ್ಟಿಟ್ಯೂಟ್ (ಎನ್‌ಟಿಐ) ಗೃಹ ನಿರ್ಮಾಣ ಸಹಕಾರ ಸೊಸೈಟಿ ಲಿಮಿಟೆಡ್ ಸಂಸ್ಥೆ ಸಹಕಾರ ಸೊಸೈಟಿಸ್ ಆಕ್ಟ್ ಪ್ರಕಾರ ನೋಂದಣಿಯಾಗಿದೆಯೇ ; ನೋಂದಣಿ ಬೈಲಾ ಪ್ರಕಾರ ನಿವೇಶನ ಹಂಚಲು ಇರುವ ಷರತ್ತುಗಳು ಏನು ; (ಪೂರ್ಣ ವಿವರ ನೀಡುವುದು)

(ಆ) ಎನ್‌ಟಿಐ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ಪ್ರಾರಂಭದಿಂದ ಈವರೆವಿಗೂ ನಿವೇಶನ ಪಡೆದಿರುವವರ ಸಂಪೂರ್ಣ ವಿವರ ಒದಗಿಸುವುದು ? (ಸದಸ್ಯರ ಹೆಸರು, ಸದಸ್ಯತ್ವ ನೋಂದಣಿ ದಿನಾಂಕ, ನಿವೇಶನ ಮಂಜೂರಾತಿ ಬಗ್ಗೆ ವಿವರ ನೀಡುವುದು)

## ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಾರ್ವಜನಿಕ ಉದ್ಯಮಗಳ ಬಗ್ಗೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩ (೧೧೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಾರ್ವಜನಿಕ ಉದ್ಯಮಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)



(ಆ) ಆ ಪೈಕಿ ಲಾಭದಲ್ಲಿರುವ ಉದ್ಯಮಗಳ ಸಂಖ್ಯೆ ಎಷ್ಟು ; ನಷ್ಟದಲ್ಲಿರುವ ಉದ್ಯಮಗಳ ಸಂಖ್ಯೆ ಎಷ್ಟು ; ನಷ್ಟ ಭರಿಸಲು ಪ್ರತಿ ವರ್ಷ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು ; (ವರ್ಷವಾರು ವಿವರ ಒದಗಿಸುವುದು)

(ಇ) ಸಾಮಾಜಿಕ ಸೇವೆಗೆ ಬದ್ಧವಾಗಿರುವ ಉದ್ಯಮಗಳ ಸಂಖ್ಯೆ ಎಷ್ಟು ? (ಉದ್ಯಮಗಳ ವಿವರ ಒದಗಿಸುವುದು)

## ಚರ್ಚ್‌ಗಳ ದುರಸ್ತಿಗೆ ನೀಡಿದ ಅನುದಾನದ ಬಗ್ಗೆ.

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೪ (೧೨೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩, ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಕರ್ನಾಟಕ ಕ್ರಿಶ್ಚಿಯನ್ ಅಭಿವೃದ್ಧಿ ನಿಧಿಯಿಂದ ಚರ್ಚ್‌ಗಳ ದುರಸ್ತಿಗಾಗಿ ಬಿಡುಗಡೆಗೊಂಡ ಅನುದಾನದ ಮೊತ್ತವೆಷ್ಟು ; (ವರ್ಷವಾರು, ಜಿಲ್ಲಾವಾರು ಮತ್ತು ಚರ್ಚ್‌ವಾರು ಮಾಹಿತಿ ನೀಡುವುದು)

(ಆ) ರಾಜ್ಯಾದ್ಯಂತ ಚರ್ಚ್‌ಗಳ ದುರಸ್ತಿಗಾಗಿ ಈವರೆವಿಗೂ ಎಷ್ಟು ಅರ್ಜಿಗಳು ಬಂದಿವೆ ; (ವರ್ಷವಾರು, ಜಿಲ್ಲಾವಾರು ಮತ್ತು ಚರ್ಚ್‌ವಾರು ಮಾಹಿತಿ ನೀಡುವುದು)

(ಇ) ಇದರಲ್ಲಿ ಎಷ್ಟು ಅರ್ಜಿಗಳಿಗೆ ಅನುದಾನ ಬಿಡುಗಡೆಗೊಂಡಿದೆ ; ಎಷ್ಟು ಅರ್ಜಿಗಳು ತಿರಸ್ಕೃತಗೊಂಡಿದೆ ; ತಿರಸ್ಕೃತಗೊಳ್ಳಲು ಕಾರಣಗಳೇನು ? (ವರ್ಷವಾರು, ಜಿಲ್ಲಾವಾರು, ಚರ್ಚ್‌ವಾರು ಮಾಹಿತಿ ನೀಡುವುದು)

## ಬೆಂಗಳೂರು–ಮಡಿಕೇರಿ ರಸ್ತೆಗಳಲ್ಲಿನ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ತೆರವುಗೊಳಿಸುವ ಬಗ್ಗೆ.

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೮೫ (೧೨೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೈಸೂರು ಮಡಿಕೇರಿ ಹೆದ್ದಾರಿಯ ಮಾರ್ಗ ಮಧ್ಯ ಒಟ್ಟು ಎಷ್ಟು ರಸ್ತೆ ಉಬ್ಬುಗಳಿವೆ ; ಆ ಪೈಕಿ ಅವೈಜ್ಞಾನಿಕ ರಸ್ತೆ ಉಬ್ಬುಗಳ ಸಂಖ್ಯೆ ಎಷ್ಟು ;

(ಆ) ಸದರಿ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಯಾವ ಕಾಲಮಿತಿಯೊಳಗೆ ಇದನ್ನು ತೆರವುಗೊಳಿಸಲಾಗುವುದು ?

## ವಿವಿಧ ಯೋಜನೆಗಳಡಿಯಲ್ಲಿ ಸಹಾಯಧನ/ಸಬ್ಸಿಡಿ/ಪ್ರೋತ್ಸಾಹ ಧನ ನೀಡಿಕೆ ಕುರಿತು.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೮೬ (೧೨೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ (KREDL) ಸಂಸ್ಥೆಯಿಂದ ೨೦೦೬–೦೭ನೇ



ಸಾಲಿನಿಂದ ಇಲ್ಲಿಯವರೆಗೆ ಸೌರಶಕ್ತಿ ವಿದ್ಯುತ್ ಯೋಜನೆ, ಪವನ ಶಕ್ತಿ ವಿದ್ಯುತ್ ಯೋಜನೆ ಮತ್ತು ಕಿರುಜಲ ವಿದ್ಯುತ್ ಯೋಜನೆಯಡಿಯಲ್ಲಿ ಯಾವ ಯಾವ ಸಂಸ್ಥೆಗಳಿಗೆ/ವ್ಯಕ್ತಿಗಳಿಗೆ ಎಷ್ಟು ಸಹಾಯ ಧನ/ಸಬ್ಸಿಡಿ/ಪ್ರೋತ್ಸಾಹ ಧನ ಹಣವನ್ನು ನೀಡಲಾಗಿದೆ ; (ವರ್ಷವಾರು, ಯೋಜನಾವಾರು ವಿವರವಾದ ಮಾಹಿತಿ ನೀಡುವುದು)

(ಆ) (KREDL) ಸಂಸ್ಥೆಯಲ್ಲಿ ಹಾಲಿ ಎಷ್ಟು ಜನ ನೌಕರರು ಮಾನವಶಕ್ತಿ ಏಜೆನ್ಸಿಯಡಿ ಸೇವೆ ಕಾರ್ಯನಿರ್ವಹಿಸುತ್ತಿದ್ದಾರೆ ; (ಅವರ ಹೆಸರು, ಸೇವೆಗೆ ಸೇರಿದ ದಿನಾಂಕ, ವಿದ್ಯಾಭ್ಯಾಸ, ಹಾಲಿ ಪಡೆಯುತ್ತಿರುವ ಸಂಬಳ ಹಾಗೂ ಮಾನವ ಶಕ್ತಿ ಏಜೆನ್ಸಿಯ ಹೆಸರು, ವಿಳಾಸಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಸಂಸ್ಥೆಯಲ್ಲಿ ೨೦೦೨ ರಿಂದ ಇಲ್ಲಿಯವರೆಗೆ ಎಷ್ಟು ಜನ ನೌಕರರಿಗೆ ಪದೋನ್ನತಿ ನೀಡಲಾಗಿದೆ ? (ನೌಕರರ ಹೆಸರು, ಸಂಸ್ಥೆಗೆ ಸೇರಿದ ದಿನಾಂಕ, ಖಾಯಂಗೊಂಡ ದಿನಾಂಕ ಹಾಗೂ ಹುದ್ದೆ, ನಂತರ ಪದೋನ್ನತಿ ಪಡೆದ ಹುದ್ದೆ ಹಾಗೂ ದಿನಾಂಕ ಹಾಗೂ ಸಂಬಂಧಪಟ್ಟಂತೆ ವೇತನ ಶ್ರೇಣಿ ಮತ್ತು ತಿಂಗಳಿಗೆ ಪಡೆಯುತ್ತಿರುವ ಒಟ್ಟು ವೇತನ ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

## ಹಂಗಳದಿಂದ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಹೋಗುವ ರಸ್ತೆ ದುರಸ್ಥಿಗೆ ಒಳಗಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭ (೮೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಂಗಳದಿಂದ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ಹೋಗುವ ರಸ್ತೆಯು ಪ್ರಮುಖ ಪ್ರವಾಸಿ ರಸ್ತೆಯಾಗಿದ್ದು ಇದು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅದರಲ್ಲೂ ಬೆಟ್ಟದ ಬುಡದಿಂದ ಬೆಟ್ಟದ ತುದಿಗೆ ಹೋಗುವ ಘಾಟ್ ಸೆಕ್ಷನ್ ರಸ್ತೆಯು ಸಂಪೂರ್ಣವಾಗಿ ಹಾಳಾಗಿ ಅಪಾಯಕಾರಿ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರತಿದಿನ ನೂರಾರು ಪ್ರವಾಸಿ ವಾಹನಗಳು ಸಂಚರಿಸುತ್ತಿರುವ ಈ ರಸ್ತೆಯನ್ನು ಕೂಡಲೇ ದುರಸ್ಥಿ ಮಾಡಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)



## ವಿದ್ಯುತ್ ಪಂಪ್‌ಸೆಟ್‌ಗಳಿಗೆ ಪೂರ್ಣ ಪ್ರಮಾಣದಲ್ಲಿ ವಿದ್ಯುತ್ ಸರಬರಾಜು ಮಾಡುವ ಬಗ್ಗೆ.

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೮ (೮೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ರೈತರ ಜಮೀನಿನಲ್ಲಿರುವ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ವಿದ್ಯುತ್ ಪಂಪ್‌ಸೆಟ್‌ಗಳಿಗೆ ಪೂರ್ಣಪ್ರಮಾಣದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆಯೇ ; (ಪ್ರಮಾಣದ ವಿವರ ನೀಡುವುದು)

(ಇ) ಕೊರತೆ ಇರುವ ವಿದ್ಯುತ್‌ನ್ನು ರೈತರ ಪಂಪ್‌ಸೆಟ್‌ಗಳಿಗೆ ಸಂಪೂರ್ಣ ಪ್ರಮಾಣದಲ್ಲಿ ಸರಬರಾಜು ಮಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ; ಈ ಬಗ್ಗೆ ವಿವರ ನೀಡುವುದು;

(ಈ) ೨೦೧೪-೧೫ನೇ ಸಾಲಿನಲ್ಲಿ ರೈತರು ತೆಗೆಸಿರುವ ಕೊಳವೆಬಾವಿಗಳಿಗೆ ಸಂಪೂರ್ಣ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಬಾಕಿ ಇರುವ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಗೆ ಕಳೆದ ಎರಡು ವರ್ಷಗಳಲ್ಲಿ ಮಂಜೂರಾದ ಅನುದಾನ ಮತ್ತು ಕಾಮಗಾರಿಗಳ ಬಗ್ಗೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೯ (೧೦೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಗೆ ಕಳೆದ ೨ ವರ್ಷಗಳಿಂದ ಲೋಕೋಪಯೋಗಿ ಇಲಾಖೆಗೆ ಮಂಜೂರಾದ ಅನುದಾನ ಎಷ್ಟು ;

(ಆ) ಮಂಜೂರಾದ ಅನುದಾನದಲ್ಲಿ ಇಲ್ಲಿಯವರೆಗೆ ಕೈಗೊಂಡ ಕಾಮಗಾರಿಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೈಗೊಂಡಿರುವ ಕಾಮಗಾರಿಗಳು ಯಾವ ಹಂತದಲ್ಲಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕೊಪ್ಪಳ ಜಿಲ್ಲೆಯ ಪ್ರತಿ ತಾಲ್ಲೂಕಿಗೆ ೨ ವರ್ಷದಲ್ಲಿ ಹಂಚಿಕೆಯಾದ ಅನುದಾನ ಎಷ್ಟು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಗೆ ತೋಟಗಾರಿಕೆ ಇಲಾಖೆಯಿಂದ ಮಂಜೂರಾದ ಅನುದಾನದ ಬಗ್ಗೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦ (೧೦೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ೧ ವರ್ಷದಲ್ಲಿ ತೊಟಗಾರಿಕೆ ಇಲಾಖೆಯಿಂದ ಮಂಜೂರಾದ ಅನುದಾನ ಎಷ್ಟು ;

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಲಾಗಿದೆ ;



(ಇ) ಅನುದಾನ ಮಂಜೂರಾದ ಯೋಜನೆಗಳು ಯಾವ ಹಂತದಲ್ಲಿ ಇವೆ ;

(ಈ) ಕೊಪ್ಪಳ ಜಿಲ್ಲೆಯ ಪ್ರತಿ ತಾಲ್ಲೂಕಿಗೆ ಹಂಚಿಕೆಯಾದ ಅನುದಾನ ಎಷ್ಟು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಗೆ ಕಳೆದ ೨ ವರ್ಷಗಳಲ್ಲಿ ಎ.ಪಿ.ಎಮ್.ಸಿ ಗಳಿಗೆ ಮಂಜೂರಾದ ಅನುದಾನ ಬಗ್ಗೆ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧ (೧೦೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಗೆ ಕಳೆದ ೨ ವರ್ಷಗಳಲ್ಲಿ ಎ.ಪಿ.ಎಮ್.ಸಿ.ಗಳಿಗೆ ಮಂಜೂರಾದ ಅನುದಾನ ಎಷ್ಟು ; (ಎ.ಪಿ.ಎಮ್.ಸಿ ವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಕೈಗೊಳ್ಳಲಾಗಿರುವ ಯೋಜನೆಗಳು ಯಾವ ಹಂತದಲ್ಲಿ ಇವೆ ; (ಎ.ಪಿ.ಎಮ್.ಸಿ ವಾರು ಮಾಹಿತಿ ನೀಡುವುದು)

(ಈ) ಪ್ರತಿ ತಾಲ್ಲೂಕಿಗೆ ಹಂಚಿಕೆ ಮಾಡಿದ ಅನುದಾನ ಎಷ್ಟು ?

## ಕಲಬುರಗಿ ಜಿಲ್ಲೆಯ ರೈತರಿಗೆ ಸಾಲ ಒದಗಿಸುವ ಕುರಿತು.

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ(ನಾಮನಿರ್ದೇಶನ) :–**

೯೨ (೧೧೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಗೆ ಇಲಾಖಾ ವತಿಯಿಂದ ಒಟ್ಟು ಎಷ್ಟು ರೈತರಿಗೆ ಸಾಲ ನೀಡಲಾಗಿದೆ ;

(ಆ) ಯಾವ ಯಾವ ಯೋಜನೆಗಳಲ್ಲಿ ನೀಡಲಾಗಿದೆ ಪ್ರತಿ ಎಕರೆಗೆ ಎಷ್ಟು ಸಾಲ ನೀಡಲಾಗುತ್ತಿದೆ ; (ವಿವರ ಒದಗಿಸುವುದು)

(ಇ) ಹೊಸ ಯೋಜನೆಗಳಿಂದ ರೈತರಿಗೆ ಸಾಲ ಒದಗಿಸಲು ಸರ್ಕಾರದಿಂದ ಚಿಂತನೆ ನಡೆಸಲಾಗಿದೆಯೇ ? (ಇದ್ದರೆ, ವಿವರ ಒದಗಿಸುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ. 0 3477/ 1000 ಪ್ರತಿಗಳು/29–01–15